ಯುವ ಸ್ಫೂರ್ತಿ



ಒಂದು ಸಾಮಾನ್ಯ ಕೆಲಸವನ್ನು ಅತ್ಯುತ್ತಮವಾಗಿ ಮಾಡುವುದರಿಂದ ಶ್ರೇಷ್ಠ ಪ್ರತಿಫಲ ದೊರಕುತ್ತದೆ.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 189 | ಶನಿವಾರ: 10–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 189 | SATURDAY: 10–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಭಾರತದ ದಾಳಿಯಿಂದ ಪಾಕಿಸ್ತಾನ ಸಾಕಷ್ಟು ನಷ್ಟ ಅನುಭವಿಸಿದೆ : ವಿಕ್ರಮ್



**ನವದೆಹಲಿ,ಮೇ.10–** ದೆಹಲಿಯಲ್ಲಿ ವಿದೇಶಾಂಗ ಇಲಾಖೆ ಕಾರ್ಯದರ್ಶಿ ವಿಕ್ರಮ್ ಮಾತನಾಡಿ, ಗುರುವಾರ ರಾತ್ರಿ ಭಾರತದ ಹಲವು ನಗರಗಳ ಮೇಲೆ ಡ್ರೋನ್ ದಾಳಿಗೆ ಯತ್ನ ನಡೆದಿತ್ತು. ಡ್ರೋನ್ ದಾಳಿ ನಡೆಸಿಲ್ಲ ಎಂದು ಎಂದಿನಂತೆ ಪಾಕಿಸ್ತಾನ ಸುಳ್ಳು ಹೇಳಿದೆ. ಡ್ರೋನ್ ದಾಳಿ ವೇಳೆ ನಾಗರಿಕ ವಿಮಾನಗಳ ಹಾರಾಟ ಸ್ಥಗಿತಗೊಳಿಸಿರಲಿಲ್ಲ ಲಾಹೋರ್, ಕರಾಚಿಯಲ್ಲಿ ವಿಮಾನಗಳ ಹಾರಾಟ ಎಂದಿನಂತೆ ಇತ್ತು. ಭಾರತದ ಪ್ರತೀಕಾರದ ದಾಳಿಯಲ್ಲಿ ಪಾಕ್ ಸಾಕಷ್ಟು ನಷ್ಟ ಅನುಭವಿಸಿದೆ ಎಂದು ತಿಳಿಸಿದರು.

ಪೂಂಚ್‌ನಲ್ಲಿ ಶಾಲೆಗಳನ್ನು ಗುರಿಯಾಗಿಸಿ ಪಾಕ್ ಸೇನೆ ದಾಳಿ ನಡೆಸಿತ್ತು. ಪೂಂಚ್‌ನಲ್ಲಿ ಪಾಕ್ ಸೇನೆ ದಾಳಿಯಲ್ಲಿ ಇಬ್ಬರು ವಿದ್ಯಾರ್ಥಿಗಳು ಬಲಿಯಾಗಿದ್ದಾರೆ. ಇದಕ್ಕೆ ಭಾರತವು ಪಾಕ್‌ನ 4 ಸ್ಥಳಗಳ ಮೇಲೆ ದಾಳಿ ನಡೆಸಿ ಪ್ರತೀಕಾರ ತೀರಿಸಿಕೊಂಡಿದೆ. ಪಾಕಿಸ್ತಾನದ ಸೇನೆಯ ಕ್ರಮ ಹೇಡಿತನದ್ದು. ಭಾರತ ಸಂಯಮದಿಂದ ವರ್ತಿಸಿದೆ, ಪಾಕಿಸ್ತಾನಕ್ಕೆ ತಕ್ಕ ಪ್ರತ್ಯುತ್ತರ ನೀಡಿದೆ. ಭಾರತದ ವಾಯುನೆಲೆಯನ್ನು ಗುರಿಯಾಗಿಸಲು ಪಾಕ್ ಪ್ರಯತ್ನಿಸಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾತನಾಡಿ, ಬತಿಂಡಾ ಸೇನಾನೆಲೆ ಗುರಿಯಾಗಿಸಿ ನಿನ್ನೆ ಪಾಕ್ ಸೇನೆ ದಾಳಿ ಯತ್ನ ನಡೆಸಿದ್ದು, ಏರ್ ಡಿಫೆನ್ಸ್ ಸಿಸ್ಟಮ್ ಬಗ್ಗೆ ಟೆಸ್ಟ್ ಮಾಡಲು ನಿನ್ನೆ ದಾಳಿ ನಡೆಸಿದೆ. ಟರ್ಕಿ ನಿರ್ಮಿತ ಡ್ರೋನ್‌ಗಳಿಂದ ನಿನ್ನೆ ಪಾಕ್ ಸೇನೆ ದಾಳಿ ನಡೆಸಿದೆ. ಆದ್ರೆ, ಅದನ್ನು ವಿಫಲಗೊಳಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು.

2ನೇ ಪುಟಕ್ಕೆ

## ಮೆಣಸಿನಕಾಯಿ ಬೆಳೆಗಾರರಿಗೆ ಕೊನೆಗೂ ನೆಮ್ಮದಿ ಸಿಕ್ಕಿದೆ: ಜಿ.ಕುಮಾರ ನಾಯಕ

**ಯುವ ಮಾರ್ಗ ಸುದ್ದಿ**

**ರಾಯಚೂರು,ಮೇ.10–** ಕೇಂದ್ರ ಬಜೆಟ್ ಚರ್ಚೆಯ ಸಂದರ್ಭದಲ್ಲಿ, ಕರ್ನಾಟಕದ ಮೆಣಸಿನಕಾಯಿ ಬೆಳೆಗಾರರ ಸಮಸ್ಯೆಯನ್ನು ಪ್ರಸ್ತಾಪಿಸಿ, ನಮ್ಮ ರೈತರನ್ನು ರಕ್ಷಿಸಲು ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯನ್ನು ಜಾರಿಗೊಳಿಸುವಂತೆ ಸರ್ಕಾ ರವನ್ನು ಒತ್ತಾಯಿಸಲಾಗಿತ್ತು ಅದರಂತೆ ಇಂದು ಮೆಣಸಿನಕಾಯಿಗೆ ಬೆಳೆಗೆ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿ ಕೊರತೆಯಾಗಿರುವ ಬೆಲೆಯನ್ನು (ಪಿಡಿಪಿ) ಪಾವತಿಸುವಂತೆ ಸೂಚನೆ ನೀಡಿರುವುದು ಸತತ ಹೋರಾಟಕ್ಕೆ ಸಿಕ್ಕ ಜಯವಾಗಿದೆ ಎಂದು ಸಂಸದ ಜಿ. ಕುಮಾರ ನಾಯಕ ಹೇಳಿ




ದರು. ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕೆಂಪು ಮೆಣಸಿನಕಾಯಿ ಇಳುವರಿ ಉತ್ತಮವಾದರೂ ಕೂಡ ಬೆಲೆ ಕುಸಿತದಿಂದ ರೈತರು ಕಂಗಾಲಾಗಿದ್ದರು. ಅದರಲ್ಲೂ ರಾಯಚೂರು ಮತ್ತು ಯಾದಗಿರಿಯ ಸಾವಿರಾರು ರೈತರ ಜೀವನದ ಮೇಲೆ ತೀವ್ರವಾಗಿ ಪರಿಣಾಮ ಬೀರುತ್ತಿರುವ ಬಗ್ಗೆ ರಾಜ್ಯ ಮತ್ತು ಕೇಂದ್ರ ಸಚಿವರೊಂದಿಗೆ ಹಲವಾರು ಬಾರಿ ಸಭೆಗಳನ್ನು ನಡೆಸಿದ ನಂತರ ಸಚಿವರಾದ ಎನ್.ಎಸ್. ಬೋಸರಾಜು ಅವರು ಇಡೀ ಪ್ರಕ್ರಿಯೆಯಲ್ಲಿ ತಮ್ಮ ಅಚಲ ಬೆಂಬಲವನ್ನು ನೀಡಿ.ನಾನು ಕರ್ನಾಟಕದ ಮುಖ್ಯಮಂತ್ರಿಗಳಿಗೆ ಈ ಬಗ್ಗೆ ಮಾಹಿತಿ ನೀಡಿದೆ, ಅವರು ಕೇಂದ್ರ ಕೃಷಿ ಸಚಿವರಿಗೆ ಪತ್ರ ಬರೆದು

2ನೇ ಪುಟಕ್ಕೆ

## ಆರ್ಥಿಕವಾಗಿ ದಿವಾಳಿಯತ್ತ ಸಾಗಿದ ಪಾಕ್, ಹಣಕಾಸಿನ ನೆರವಿಗಾಗಿ ಹಲವು ರಾಷ್ಟ್ರಗಳ ಬಳಿ ಭಿಕ್ಷಾಟನೆ

**ಇಸ್ಲಾಮಾಬಾದ್, ಮೇ10–** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಭೀಕರ ನರಬೇಧಕ್ಕೆ ಪ್ರತಿಯಾಗಿ ಭಾರತದ ದಾಳಿಗೆ ಕಂಗಲಾಗಿರುವ ಪಾಕಿಸ್ತಾನ ಇದೀಗ ಆರ್ಥಿಕತೆಯಲ್ಲೂ ಪಾತಾಳಕ್ಕೆ ಕುಸಿಯುತ್ತಿದೆ. ಮೊದಲೇ ಆರ್ಥಿಕವಾಗಿ ಬಸವಳಿದಿದ್ದ ಪಾಕ್ ಭಾರತದ ದಾಳಿಯಿಂದ ಭಾರೀ ಹೊಡೆತಕ್ಕೆ ಸಿಲುಕಿದ್ದು, ಇದೀಗ ಸಾವರ್ಜನಿಕ ವೇದಿಕೆಯಲ್ಲೇ ಹಣ ನೀಡುವಂತೆ ಗೋಗರೆದಿದೆ.

ಪಾಕಿಸ್ತಾನದ ಅಧಿಕೃತ ಖಾತೆಯಲ್ಲಿ ಇಂತಹುದೊಂದು ಟ್ವಿಟ್ ಅನ್ನು ಪಾಕಿಸ್ತಾನ ಸರ್ಕಾರ ಪೋಸ್ಟ್ ಮಾಡಿದೆ. (ಆರ್ಥಿಕ ವ್ಯವಹಾರಗಳ ವಿಭಾಗ, ಪಾಕಿಸ್ತಾನ ಸರ್ಕಾರ) ಎಂಬ ಪಾಕಿಸ್ತಾನ ಸರ್ಕಾರದ ಅಧಿಕೃತ ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿ, ಕುಸಿಯುತ್ತಿರುವ ನಮ್ಮ ಆರ್ಥಿಕತೆಗೆ ನಮ್ಮ ಅಂತಾರಾಷ್ಟ್ರೀಯ ಪಾಲುದಾರರು ಹಣಕಾಸಿನ ನೆರವು ನೀಡುವಂತೆ ಗೋಗರೆದಿದೆ.

ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗದ ಅಧಿಕೃತ ಖಾತೆಯ ತನ್ನ ಟ್ವಿಟ್‌ನಲ್ಲಿ, ನಮ್ಮ ಶತ್ರುಗಳಿಂದ ಉಂಟಾದ ಭಾರೀ ನಷ್ಟದ ನಂತರ ಹೆಚ್ಚಿನ ಸಾಲಕ್ಕಾಗಿ ಪಾಕಿಸ್ತಾನ ಸರ್ಕಾರವು ಅಂತರರಾಷ್ಟ್ರೀಯ ಪಾಲುದಾರರಿಗೆ ಮನವಿ ಮಾಡುತ್ತಿದೆ. ಯುದ್ಧದ ಉದ್ವೇಗ ಮತ್ತು ಷೇರುಪೇಟೆಯ ಕುಸಿತದ ನಡುವೆ, ನಾವು ಅಂತರರಾಷ್ಟ್ರೀಯ ಪಾಲುದಾರರು ಯುದ್ಧದ ಉದ್ವೇಗವನ್ನು ಕಡಿಮೆ ಮಾಡುವಲ್ಲಿ ಸಹಾಯ ಮಾಡಲು ವಿನಂತಿಸುತ್ತೇವೆ. ಜನತೆಗೆ ಧೈರ್ಯದಿಂದ ಸ್ಥಿರವಾಗಿರಲು ಕರೆ ನೀಡಲಾಗಿದೆ ಎಂದು ಬರೆಯಲಾಗಿದೆ. ಜೊತೆಗೆ ಈ ಟ್ವಿಟ್ ಅನ್ನು ವಿಶ್ವ ಬ್ಯಾಂಕ್‌ಗೆ ಟ್ಯಾಗ್ ಮಾಡಲಾಗಿದೆ.



ಪಹಲ್ಯಾಮ್ ಉಗ್ರ ದಾಳಿ ಮತ್ತು ಇದಕ್ಕೆ ಉತ್ತರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ್ ಏರ್ ಸ್ಟೈಕ್ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನತೆ ಭುಗಿಲೆದ್ದಿದ್ದು, ಯುದ್ಧದ ರೀತಿಯ ವಾತಾವರಣ ರೂಪುಗೊಂಡಿದೆ.ಬುಧವಾರ ರಾತ್ರಿಯಿಂದ ಆರಂಭವಾದ ಭಾರತ ಮತ್ತು ಪಾಕಿಸ್ತಾನ ಸೇನಾ ಸಂಘರ್ಷ ಮುಂದುವರೆದಿರುವಂತೆಯೇ ಇತ್ತ ಪಾಕಿಸ್ತಾನದ ಬೊಕ್ಕಸ ಕೇವಲ ಯುದ್ಧ ಆರಂಭವಾದ 48 ಗಂಟೆಗಳಲ್ಲಿ ಖಾಲಿಯಾಗಿದ್ದು, ಪಾಕಿಸ್ತಾನ ಆರ್ಥಿಕ ನೆರವಿಗಾಗಿ ಮತ್ತೆ ಜಾಗತಿಕ ಸಮುದಾಯದ ಮುಂದೆ ಕೈಚಾಚಿದೆ.ಈ ಬಗ್ಗೆ ಸ್ವತಃ ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾ ರಗಳ ವಿಭಾಗ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಮನವಿ ಮಾಡಿದ್ದು, ಟ್ವಿಟ್ ಮೂಲಕ ಆರ್ಥಿಕ ನೆರವು ನೀಡುವಂತೆ ತನ್ನ ಮಿತ್ರ ರಾಷ್ಟ್ರಗಳಿಗೆ ಕೇಳಿಕೊಂಡಿದೆ.ಷೇರುಗಳು ಕುಸಿ ಯುತ್ತಿರುವುದರಿಂದ ಆರ್ಥಿಕ ಉಲ್ಬಣವನ್ನು ಕಡಿಮೆ ಮಾಡಲು ಸಹಾಯ ಮಾಡುವಂತೆ ಅಂತರರಾಷ್ಟ್ರೀಯ ಪಾಲುದಾರರಿಗೆ ಅದು ಮನವಿ ಮಾಡಿದೆ.

ಭಾರತದ ಸೇನಾ ದಾಳಿಯಿಂದ ಪಾಕಿಸ್ತಾನಕ್ಕೆ ತೀವ್ರ ನಷ್ಟವಾಗಿದೆ. ಪಾಕಿಸ್ತಾನವು ಅಂತಾರಾಷ್ಟ್ರೀಯ ಪಾಲುದಾರರಿಗೆ ಹೆಚ್ಚಿನ ಸಾಲಕ್ಕಾಗಿ ಮನವಿ ಮಾಡಿದೆ. ಹೆಚ್ಚುತ್ತಿರುವ ಯುದ್ಧ ಮತ್ತು ಷೇರುಮಾರು ಕಟ್ಟೆ ಕುಸಿತದ ಮಧ್ಯೆ, ಸೇನಾ ಉಲ್ಬಣವನ್ನು ಕಡಿಮೆ ಮಾಡಲು ಸಹಾಯ ಮಾಡುವಂತೆ ನಾವು ಅಂತರ ರಾಷ್ಟ್ರೀಯ ಪಾಲುದಾರರನ್ನು ಒತ್ತಾಯಿಸುತ್ತೇವೆ. ರಾಷ್ಟ್ರವು ದೃಢವಾಗಿರಲು ನೆರವು ನೀಡುವಂತೆ ಒತ್ತಾಯಿಸುತ್ತೇವೆ ಎಂದು ಟ್ವಿಟ್ ಮಾಡಿದೆ.

**ವಿತ್ ಡ್ರಾಗೆ ಮಿತಿ** ಇನ್ನು ಅತ್ತ ಸೇನಾ ಸಂಘರ್ಷ ಮುಂದುವರೆದಿರುವಂತೆಯೇ ಇತ್ತ ಪಾಕಿ

2ನೇ ಪುಟಕ್ಕೆ

## ಆರೋಗ್ಯ ಇಲಾಖೆ ನೌಕರ ಮಂಜುನಾಥ ಸಾವು ಅನುಮಾನ : ತನಿಖೆಗೆ ಒತ್ತಾಯ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.10–** ಮಸ್ಕಿ ತಾಲೂಕಿನ ಮೆದಕಿನಾಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಿರಿಯ ಪ್ರಯೋಗ ಶಾಲಾ ತಂತ್ರಜ್ಞರಾಗಿದ್ದ ಮಂಜುನಾಥ ಸಾವು ಅನುಮಾನಾಸ್ಪದವಾಗಿದ್ದು ಕೂಡಲೇ ಸಮರ್ಪಕ ತನಿಖೆ ಮಾಡಬೇಕೆಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಶುಕ್ರವಾರ ಸಹಾಯಕ ಆಯುಕ್ತರಿಗೆ ಆಗ್ರಹಿಸಿದರು. ದಿನಾಂಕ 3–05–2025 ರಂದು ಮಂಜುನಾಥ ಕಾಣೆಯಾಗಿದ್ದರು, ಸೋಮವಾರ ಮದ್ಯಾಹ್ನ ಇವ ರ ಮೃತದೇಹ ಮಸ್ಕಿಯ ಠಾಕೂರ ಲೇಔಟ್‌ನಲ್ಲಿ ಪತ್ತೆಯಾಗಿದೆ. ಇದು ಅನುಮಾನಾಸ್ಪದ ಸಾವು ಆಗಿದ್ದು ಕೂಡಲೇ ಪೊಲೀಸ್ ತನಿಖೆ ನಡೆಯಬೇಕೆಂದು ಒತ್ತಾಯಿಸಿದರು.ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುವಾಗ ಮಹಿಳಾ ಸಿಬ್ಬಂದಿಗಳ ಮೇಲೆ ಹಲ್ಲೆ, ಅವಾಚ್ಯ ಶಬ್ದಗಳ ನಿಂದನೆಯಂತಹ ಪ್ರಕರಣಗಳು ನಡೆಯುತ್ತಿವೆ. ರಾತ್ರಿ ಪಾಳೆಯದಲ್ಲಿ ಕರ್ತವ್ಯ ನಿರ್ವಹಿ ಸುವ ಸಿಬ್ಬಂದಿಗಳಿಗೆ ರಕ್ಷಣೆ ಇಲ್ಲದಂತಾಗಿದೆ. ತಾಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಕೆಲಸ ಮಾಡುವವರಿಗೆ ರಕ್ಷಣೆ ನೀಡಬೇಕು. ರಾತ್ರಿ ವೇಳೆ ಸರ್ಕಾರಿ ಆಸ್ಪತ್ರೆಗಳ ಸುತ್ತಮುತ್ತ ಪೊಲೀಸ್ ಗಸ್ತು ಹೆಚ್ಚಿಸಬೇಕು ಆಗ್ರಹಿಸಿದರು. ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ತಾಲೂಕ ಅಧ್ಯಕ್ಷ ಹಾಜಿಬಾಬು ಕಲ್ಯಾಣ, ರಾಜ್ಯ ಸಂಘದ ರಾಮಕೃಷ್ಣ, ತಾವರೆಪ್ಪ ನಾಯ್ಕು, ಈರಪ್ಪ ಶಿರಸಗಿ, ವೈದ್ಯಾಧಿಕಾರಿ ಡಾ.ರುದ್ರಗೌಡ, ಡಾ.ದಿಗಂಬರ್, ಡಾ.ಶ್ವೇತಾ, ಅಮರಪ್ಪ ಸಾಲಿ, ಡಾ.ಪ್ರಾಣೇಶ ಇದ್ದರು.

## ಗಣತಿದಾರರಿಂದ ಸಮೀಕ್ಷೆ ಗೊಂದಲ ಸರಿಪಡಿಸಲು ಆಗ್ರಹ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.10–**ಜಾತಿ ಸಮೀಕ್ಷೆ ಮಾಡುವಾಗ ಗಣತಿದಾರರು ಗ್ರಾಮೀಣ ಪ್ರದೇಶದಲ್ಲಿ ಗೊಂದಲ ಉಂಟು ಮಾಡುತ್ತಿದ್ದು ನಿವಾರಿಸಬೇಕೆಂದು ಆಗ್ರಹಿಸಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಪಾಮಯ್ಯ ಮುರಾರಿ ನೇತೃತ್ವದಲ್ಲಿ ಸಹಾಯಕ ಆಯುಕ್ತರು ಹಾಗೂ ಪರಿಶಿಷ್ಟ ಜಾತಿ ಒಳ ಮೀಸಲು ನೊಡೆಲ್ ಅಧಿಕಾರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು. ಈಗಾಗಲೆ ಪರಿಶಿಷ್ಟ ಜಾತಿಗಳ ಒಳ ಮೀಸಲು ಜಾತಿ ಸಮೀಕ್ಷೆ ನಡೆಸಲಾಗುತ್ತಿದೆ. ಜಾತಿ ಸಮೀ ಕ್ಷೆ ಮಾಡುವಾಗ ಗ್ರಾಮೀಣ ಪ್ರದೇಶದ ಜನರು ಆಡು ಭಾಷೆ ಯಲ್ಲಿ ಹರಿಜನ ಅಥವಾ ಮಾದರ್ ಎಂದು ಹೇಳುವುದು ಸಹಜ ಗಣತಿದಾರರು ಅದ ನ್ನು ಮಾದಿಗ ಎಂದು ನಮೂ ದಿಸಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ. ಆದರೆ ಕ್ರಸಂ 61ರ ಲ್ಲಿ ಮಾದಿಗ ಎಂದು ನಮೂ ದಿಸಬೇಕು ಎಂದು ಆಗ್ರಹಿಸಿದರು.ಜಾತಿ ಸಮೀಕ್ಷೆ ವೇಳೆ ಕುಟುಂಬಗಳ ಪಡಿತರ ಚೀಟಿ ಕೇಳುತ್ತಿದ್ದಾರೆ. ಪಡಿತರ ಚೀಟಿ ಇಲ್ಲದ ಕುಟುಂಬವನ್ನು ಸಮೀಕ್ಷೆಯಿಂದ

2ನೇ ಪುಟಕ್ಕೆ

## ದೇಶದ ವಿಮಾನ ನಿಲ್ದಾಣಗಳಲ್ಲಿ ಹೈ ಅಲರ್ಟ್,

**ನವದೆಹಲಿ, ಮೇ 10–** ದೇಶದ ವಿಮಾನ ನಿಲ್ದಾಣಗಳಲ್ಲಿ ಜಾಗೃತ ಭದ್ರತಾ ಕ್ರಮಗಳನ್ನು ಜಾರಿಗೆ ತರಲಾಗಿದ್ದು, ವಾಯುಪ್ರದೇಶದ ನಿರ್ಬಂಧಗಳಿಂದಾಗಿ ಕೆಲವು ವಿಮಾನಗಳ ಮೇಲೆ ಪರಿಣಾಮ ಬೀರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ (ಬಿಸಿಎಎಸ್) ಎಲ್ಲಾ ವಿಮಾನಗಳ ತಪಾಸಣೆಯನ್ನು ಕಡ್ಡಾಯಗೊಳಿಸಿದೆ, ವಿಮಾನ ನಿಲ್ದಾಣಗಳ ಟರ್ಮಿನಲ್ ಕಟ್ಟಡಗಳಲ್ಲಿ ಸಂದರ್ಶಕರನ್ನು ನಿಷೇಧಿಸಿದೆ ಮತ್ತು ಒಟ್ಟಾರೆ ಭದ್ರತೆಯನ್ನು ಹೆಚ್ಚಿಸಿದೆ.ದೆಹಲಿ ವಿಮಾನ ನಿಲ್ದಾಣದ ವಿಮಾನ ಸೇವೆ ಕಾರ್ಯಾಚರಣೆಗಳು ಸಾಮಾನ್ಯವಾಗಿವೆ. ಆದಾಗ್ಯೂ, ವಿಕಸನಗೊಳ್ಳುತ್ತಿರುವ ವಾಯುಪ್ರದೇಶದ ಪರಿಸ್ಥಿತಿಗಳು ಮತ್ತು ಹೆಚ್ಚಿದ ಭದ್ರತಾ ಕ್ರಮಗಳಿಂದಾಗಿ ಕೆಲವು ವಿಮಾನ ವೇಳಾಪಟ್ಟಿಗಳ ಮೇಲೆ ಪರಿಣಾಮ ಬೀರಬಹುದು ಎಂದು ಡಿಐಎಎಲ್ ತಿಳಿಸಿದೆ.

ದೆಹಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (ಡಿಐಎಎಲ್) ದೇಶದ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣವಾದ ರಾಷ್ಟ್ರ ರಾಜಧಾನಿಯ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು (ಐಜಿಐಎ) ನಿರ್ವಹಿಸುತ್ತದೆ.ಈ ನಡುವೆ ವಿಮಾನ ಕಾರ್ಯಾಚರಣೆಗಳು ಸಾಮಾನ್ಯವಾಗಿದೆ ಎಂದು ವಿಮಾನಯಾನ ಅಧಿಕಾರಿಗಳು ತಿಳಿಸಿದ್ದಾರೆ.ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಮತ್ತು ಇತರ ಭದ್ರತಾ ಕ್ರಮಗಳನ್ನು ಹೆಚ್ಚಿಸಿದ ನಂತರ ದೇಶೀಯ ವಿಮಾನಗಳು ಹೊರಡುವ ಮೂರು ಗಂಟೆ

2ನೇ ಪುಟಕ್ಕೆ

## ಆಪರೇಷನ್ ಸಿಂಧೂರಕ್ಕೆ ಬೆಂಬಲಿಸಿ ಕಾಂಗ್ರೆಸ್‌ನಿಂದ ತಿರಂಗ ಯಾತ್ರೆ



**ಬೆಂಗಳೂರು,ಮೇ.10–**ಪೆಹಲ್ಗಾಮ್ ಉಗ್ರರ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸಿರುವ ಆಪರೇಷನ್ ಸಿಂಧೂರವನ್ನು ಬೆಂಬಲಿಸಿ ಪ್ರದೇಶ ಕಾಂಗ್ರೆಸ್ ಬೆಂಗಳೂರಿನ ಕೆಆರ್ ವೃತ್ತದಿಂದ ಮಿನ್ಸ್ ಸ್ಕ್ವೈಯರ್‌ವರೆಗೆ ತಿರಂಗಯಾತ್ರೆ ನಡೆಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರುಗಳಾದ ಎಚ್.ಕೆ ಪಾ ಟೀಲ್, ರಾಮಲಿಂಗಾರೆಡ್ಡಿ, ಬೋಸರಾಜು, ಸುಧಾಕರ್, ಡಾ.ಜಿ. ಪರಮೇಶ್ವರ್, ದಿನೇಶ್ ಗುಂಡೂರಾವ್ ಸೇರಿದಂತೆ ಹಲವು ಸಚಿವರು, ಶಾಸಕರು, ಮುಖಂಡರಾದ ಎಂ. ವಿಜಯ ಶಂಕರ್ ಹಾಗೂ ನೂರಾರು ಕಾರ್ಯಕರ್ತರುಗಳು ಪಾ ಲ್ಗೊಂಡಿದ್ದರು. ಬೆಂಗಳೂರು, ಮೇ9. ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು ಬೆಂಬಲಿಸಿ ಪ್ರದೇಶ ಕಾಂಗ್ರೆಸ್ ಇಂದು ಬೆಂಗಳೂರಿನಲ್ಲಿ ತಿರಂಗಾ ಯಾತ್ರೆ ನಡೆಸಿತು. ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿರುವ ಭಾರತೀಯ ಸೇನೆಗೆ ಬೆಂಬಲ ಸೂಚಿಸಿ ಪ್ರದೇಶ ಕಾಂಗ್ರೆಸ್ ಇಂದು ಬೆಂಗಳೂರಿನ ಕೆಆರ್ ವೃತ್ತದಿಂದ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಯ ಮಿನ್ಸ್ ಸ್ಕ್ವಾಯರ್‌ವರೆಗೂ ತಿರಂಗಾ ಯಾತ್ರೆ ನಡೆಸಿತು.ಮುಖ್ಯಮಂತ್ರಿ

2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ಮೆಣಸಿನಕಾಯಿ ಬೆಳೆಗಾರರಿಗೆ ಕೊನೆಗೂ ನೆಮ್ಮದಿ ಸಿಕ್ಕಿದೆ: ಜಿ.ಕುಮಾರ ನಾಯಕ

ತಕ್ಷಣದ ಕ್ರಮಕ್ಕೆ ಒತ್ತಾಯಿಸಿದರು. ಇದರ ನಂತರ, ಕೇಂದ್ರ ಕೃಷಿ ಕಾರ್ಯದರ್ಶಿ ಹಾಗೂ ಕರ್ನಾಟಕದ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಕಾರ್ಯದರ್ಶಿಗಳನ್ನು ಭೇಟಿಯಾಗಿ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಮನವಿ ಮಾಡಿದೆ.

ಸತತ ಹೋರಾಟದ ಪರಿಣಾಮವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 2024–25ರ ಸಾಲಿನಲ್ಲಿ ಮೆಣಸಿನಕಾಯಿಗೆ ಬೆಳೆಗೆ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿ ಕೊರತೆಯಾಗಿರುವ ಬೆಲೆಯನ್ನು (ಪಿಡಿಪಿ) ಪಾವತಿಸುವಂತೆ ಸೂಚನೆ ನೀಡಿರುವುದನ್ನು ನಾನು ಸಂತೋಷದಿಂದ ತಿಳಿಸುತ್ತೇನೆ ಎಂದರು ಇದು ಅಂತ್ಯವಲ್ಲ ಆರಂಭವಷ್ಟೇ,ಕವರೇಜ್ ಮಿತಿಯನ್ನು ಹೆಚ್ಚಿಸಲು ಮತ್ತು ಮತ್ತು ನಮ್ಮ ರೈತರಿಗೆ ನ್ಯಾಯಯುತ ಬೆಲೆ ದೊರಕುವಂತೆ ಮಾಡಲು ಕೇಂದ್ರ ಸರ್ಕಾರದೊಂದಿಗೆ ನಾನು ನಿರಂತರ ಸಂಪರ್ಕದಲ್ಲಿರುತ್ತೇನೆ ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಕೆ ಶಾಂತಪ್ಪ, ಜಯಣ್ಣ, ಜಿ ಶಿವಮೂರ್ತಿ,ರುದ್ರಪ್ಪ ಅಂಗಡಿ, ಜಯಂತ್ ರಾವ್ ಪತಂಗೆ, ಅಮರೇಗೌಡ ಅಂಚೆನಾಳ್, ಮಾಡಿಗಿರಿ ನರಸಿಂಹಲು,ಶ್ರೀನಿವಾಸ್ ರೆಡ್ಡಿ, ಯುವ ಕಾಂಗ್ರೆಸ್ ಮುಖಂಡರಾದ ರವಿ ಬೋಸರಾಜು, ಮಹಮ್ಮದ್ ಶಾಲಾಂ ಸೇರಿದಂತೆ ಪಕ್ಷದ ಮುಖಂಡರು ಇದ್ದರು.

# ಗಣತಿದಾರರಿಂದ ಸಮೀಕ್ಷೆ ಗೊಂದಲ ಸರಿಪಡಿಸಲು ಆಗ್ರಹ

ಕೈಬಿಡಲಾಗುತ್ತಿದೆ. ಪಡಿತರ ಚೀಟಿ ಇಲ್ಲದ ಕುಟುಂಬಗಳಲ್ಲಿ ಆಧಾರ ಕಾರ್ಡ, ಜನನ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರದ ಜೊತೆಗೆ ಇತರೆ ದಾಖಲೆಗಳನ್ನು ಪಡೆದು ಗಣತಿಯಲ್ಲಿ ಸೇರಿಸಬೇಕು. ಸಮೀಕ್ಷೆಯಲ್ಲಿ ಅಂಶಗಳನ್ನು ಕೇಳದೇ ಅವುಗಳನ್ನು ಕೈಬಿಡಲಾಗುತ್ತಿದೆ. ಮೂಲ ಕಸುಬು ಚಪ್ಪಲಿ ಹೊಲೆಯುವುದು, ಜಾತಿ ದೌರ್ಜನ್ಯ, ಸಾಮಾಜಿಕ ತಾರತಮ್ಯಕ್ಕೆ ಒಳಗಾಗಿರುವ ಬಗ್ಗೆ ಪ್ರಶ್ನೆ ಮಾಡುವುದಿಲ್ಲ. ಮಾದಿಗ ಸಮುದಾಯದಲ್ಲಿ ಅನಕ್ಷರಸ್ಥರು ಇರುವುದರಿಂದ ಪ್ರಶ್ನೆಗಳನ್ನು ಕೇಳಿ ಕ್ರ ಸಂ 61ರಲ್ಲಿ ಇರುವಂತೆ ಮಾದಿಗ ಎಂದು ಬರೆದುಕೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಹಿರಿಯ ಸದಸ್ಯ ರುದ್ರಪ್ಪ ಬ್ಯಾಗಿ, ಹನುಮಂತಪ್ಪ ಕುಣೆಕೆಲ್ಲೂರು, ಬಸವರಾಜ ಮ್ಯಾಗೇರಿ, ಗ್ಯಾನಪ್ಪ, ಗ್ರಾನಪ್ಪ ಕಟ್ಟಿಮನಿ, ಯಂಕಪ್ಪ ಚಿತ್ತಾಪುರ, ಮೋಹನ್ ಗೋಸ್ಲೆ, ಪ್ರೇಮಜೀವಿ, ಮೌನೇಶ ಗೊರೆಬಾಳ, ಚಂದ್ರಶೇಖರ ಗೊರೇಬಾಳ, ಅಮರೇಶ ಆನೆಹೊಸೂರು ಸೇರಿದಂತೆ ಇದ್ದರು.

# ಆಪರೇಷನ್ ಸಿಂಧೂರಕ್ಕೆ ಬೆಂಬಲಿಸಿ ಕಾಂಗ್ರೆಸ್‌ನಿಂದ ತಿರಂಗ ಯಾತ್ರೆ

ಸಿದ್ದರಾಮಯ್ಯ ಹಾಗೂ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಈ ತಿರಂಗಾ ಯಾತ್ರೆಯಲ್ಲಿ ಸಚಿವರುಗಳಾದ ಎಚ್.ಕೆ ಪಾಟೀಲ್, ರಾಮಲಿಂಗಾರೆಡ್ಡಿ, ಕೆ.ಎಚ್ ಮುನಿಯಪ್ಪ, ಬೋಸರಾಜು, ಕೆ. ಸುಧಾಕರ್, ದಿನೇಶ್ ಗುಂಡೂರಾವ್ ಸೇರಿದಂತೆ ಕಾಂಗ್ರೆಸ್‌ನ ಹಲವು ಮುಖಂಡರು, ನೂರಾರು ಕಾರ್ಯಕರ್ತರುಗಳು ತ್ರಿವರ್ಣ ಧ್ವಜ ಹಿಡಿದು ಈ ತಿರಂಗಾ ಯಾತ್ರೆಯಲ್ಲಿ ಹೆಜ್ಜೆ ಹಾಕಿದರು.ಪೆಹಲ್ಗಾಮ್‌ನ ನರಮೇಧಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸಿರುವ ಆಪರೇಷನ್ ಸಿಂಧೂರ ಕಾಯಾಚರಣೆಗೆ ಒಕ್ಕೊರಲಿನ ಬೆಂಬಲ ನೀಡುವುದು ಈ ದೇಶದ ಪ್ರತಿಯೊಬ್ಬ ನಾಗರೀಕನ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷ ಬೆಂಗಳೂರಿನ ಕೆಆರ್ ವೃತ್ತದಿಂದ ಮಿನ್ಸ್ ಸ್ಕ್ವೈಯರ್‌ವರೆಗೆ ತಿರಂಗಾ ಯಾತ್ರೆಯನ್ನು ನಡೆಸಿ ಸೇನಾ ಕಾರ್ಯಾಚರಣೆಗೆ ಬೆಂಬಲ ನೀಡಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಹೇಳಿದರು.

# ಆರ್ಥಿಕವಾಗಿ ದಿವಾಳಿಯತ್ತ ಸಾಗಿದ ಪಾಕ್, ಹಣಕಾಸಿನ ನೆರವಿಗಾಗಿ ಹಲವು ರಾಷ್ಟ್ರಗಳ ಬಳಿ ಭಿಕ್ಷಾಟನೆ

ಸ್ತಾನ ಆರ್ಥಿಕ ವ್ಯವಹಾರಗಳ ಸಚಿವಾಲಯ ತನ್ನದೇ ಪ್ರಜೆಗಳಿಗೆ ಶಾಕ್ ನೀಡಿದ್ದು, ಆರ್ಥಿಕ ಸಂಕಷ್ಟ ನಿರ್ವಹಣೆಗಾಗಿ ಪಾಕ್ ಪ್ರಜೆಗಳ ಬ್ಯಾಂಕ್ ಎಟಿಎಂ ವಿತ್ ಡ್ರಾಗೆ ಮಿತಿ ಹೇರಿದೆ. ದಿನವೊಂದಕ್ಕೆ ಕೇವಲ 3 ಸಾವಿರ ರೂ ಮಾತ್ರ ವಿತ್ ಡ್ರಾ ಮಾಡಲು ಪಾಕ್ ಪ್ರಜೆಗಳಿಗೆ ಮಿತಿ ಹೇರಿದೆ. ಅಲ್ಲದೆ ಪಾಕಿಸ್ತಾನದಲ್ಲಿ ಪರಿಸ್ಥಿತಿ ಸುಧಾರಿಸುವ ವರೆಗೂ ಬ್ಯಾಂಕ್ ಗಳಿಂದ ಹಣ ವಿತ್ ಡ್ರಾ ಮಾಡದಂತೆ ಮನವಿ ಮಾಡುತ್ತಿದೆ.

ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗದ ಅಧಿಕೃತ ಖಾತೆಯಲ್ಲಿ ಈ ರೀತಿ ಟ್ವಿಟ್ ಮಾಡಿದ ಬಳಿಕ ಜನರು ಪಾಕಿಸ್ತಾನವನ್ನು ಹಿಗ್ಗಾಮುಗ್ಗ ಟ್ರೋಲ್ ಮಾಡುತ್ತಿದ್ದಾರೆ. ನಿಮಗೆ ತಿನ್ನೋಕ ಅನ್ನವಿಲ್ಲ, ಭಾರತದ ವಿರುದ್ಧ ಯುದ್ಧಕ್ಕೆ ಹೋಗುತ್ತಿದ್ದೀರಿ. ನಿಮಗೆ ನಾಚಿಕೆ ಆಗಲ್ವೇ ಎಂದೆಲ್ಲ ಜನರು ಕಾಮೆಂಟ್ ಮಾಡುತ್ತಿದ್ದಾರೆ. ಮತ್ತೆ ಕೆಲವರು ಇದು ಪಾಕಿಸ್ತಾನದ ಅಧಿಕೃತ ಖಾತೆಯೇ ಯಾಕೆಂದರೆ ದೇಶವೊಂದು ಸಾರ್ವಜನಿಕವಾಗಿ ಹೀಗೆ ಭಿಕ್ಷೆ ಕೇಳಲು ಸಾಧ್ಯವೇ ಎಂದು ಮಾತನಾಡಿಕೊಳ್ಳುತ್ತಿದ್ದಾರೆ.

# ದೇಶದ ವಿಮಾನ ನಿಲ್ದಾಣಗಳಲ್ಲಿ ಹೈ ಅಲರ್ಟ್,

ಗಳ ಮೊದಲು ವಿಮಾನ ನಿಲ್ದಾಣವನ್ನು ತಲುಪಲು ವಿಮಾನಯಾನ ಸಂಸ್ಥೆಗಳು ಪ್ರಯಾಣಿಕರನ್ನು ಕೇಳಿಕೊಂಡಿವೆ. ಪ್ರಯಾಣಿಕರು ಎಲ್ಲಾ ಹ್ಯಾಂಡ್ ಮತ್ತು ಚೆಕ್ –ಇನ್ ಬ್ಯಾಗೇಜ್ ನಿಯಮಗಳನ್ನು ಪಾಲಿಸುವಂತೆ ಮತ್ತು ಸುಗಮ ಸೌಲಭ್ಯಕ್ಕಾಗಿ ಭದ್ರತೆ ಮತ್ತು ವಿಮಾನಯಾನ ಸಿಬ್ಬಂದಿಯೊಂದಿಗೆ ಸಹಕರಿಸುವಂತೆ ಸೂಚಿಸಿದೆ. ಪ್ರಸ್ತುತ ದೇಶದ ವಿವಿಧ ಭಾಗಗಳಲ್ಲಿ ಸುಮಾರು 27 ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ.ದೆಹಲಿ ವಿಮಾನ ನಿಲ್ದಾಣಕ್ಕೆ ಮತ್ತು ಅಲ್ಲಿಂದ ಕನಿಷ್ಠ 90 ವಿಮಾನಗಳನ್ನು ರದ್ದುಗೊಳಿಸಲಾಗಿದೆ.

# ಭಾರತದ ದಾಳಿಯಿಂದ ಪಾಕಿಸ್ತಾನ ಸಾಕಷ್ಟು ನಷ್ಟ ಅನುಭವಿಸಿದೆ : ವಿಕ್ರಮ್

ಭಾರತದ ಪ್ರತೀಕಾರದ ಕ್ರಮದಿಂದಾಗಿ ಪಾಕಿಸ್ತಾನದಲ್ಲಿ ಭೀತಿ ಉಂಟಾಗಿದೆ. ಅದರ ಹಲವು ನಗರಗಳಲ್ಲಿ ಅವ್ಯವಸ್ಥೆಯ ವಾತಾವರಣವಿದೆ. ಸೇನಾ ಶಿಬಿರಗಳಿಂದ ಜನರನ್ನು ಸ್ಥಳಾಂತರಿಸುವ ಕೆಲಸವೂ ನಡೆಯುತ್ತಿದೆ. ವಾಸ್ತವವಾಗಿ, ಪಾಕಿಸ್ತಾನದ ದಾಳಿಯನ್ನು ವಿಫಲಗೊಳಿಸಿದ ನಂತರ, ಭಾರತವು ಲಾಹೋರ್, ಇಸ್ಲಾಮಾಬಾದ್, ಕರಾಚಿ, ಸಿಯಾಲ್‌ಕೋಟ್, ಬಹವಾಲ್ಪುರ್ ಮತ್ತು ಪೇಶಾವರ್ ಸೇರಿದಂತೆ ಪಾಕಿಸ್ತಾನದ ಹಲವು ನಗರಗಳ ಮೇಲೆ ಪ್ರತೀಕಾರ ತೀರಿಸಿಕೊಂಡಿದೆ. ಸ್ಥಳೀಯ ಆಕಾಶ್ ರಕ್ಷಣಾ ಕ್ಷಿಪಣಿ ಪಾಕಿಸ್ತಾನದ ದಾಳಿಗಳನ್ನು ವಿಫಲಗೊಳಿಸಿತು.

**ಪಾಕಿಸ್ತಾನ ಸೇನೆ ಡ್ರೋನ್ ದಾಳಿಗೆ ಯತ್ನಿಸಿತ್ತು** (ಮೇ 08) ರಾತ್ರಿ ಭಾರತದ ಹಲವು ನಗರಗಳ ಮೇಲೆ ಪಾಕಿಸ್ತಾನ ಸೇನೆ ಡ್ರೋನ್ ದಾಳಿಗೆ ಯತ್ನಿಸಿತ್ತು. ಆದ್ರೆ, ಪಾಕ್‌ನ ಡ್ರೋನ್ ದಾಳಿ ಯತ್ನ ವಿಫಲಗೊಳಿಸಿದ್ದೇವೆ. ಬಳಿಕ ಲಾಹೋರ್ ಸೇರಿ ಹಲವು ನಗರಗಳ ಮೇಲೆ ಭಾರತ ಡ್ರೋನ್ ದಾಳಿ ನಡೆಸಿದ್ದೇವೆ ಎಂದು ವಿಂಗ್ ಕಮಾಂಡರ್ ಸೋಫಿಯಾ ಖುರೇಷಿ ಮಾಹಿತಿ ನೀಡಿದರು.

# ಜನಾರ್ದನರೆಡ್ಡಿ ಶಾಸಕತ್ವ ಅನರ್ಹ

**ಬೆಂಗಳೂರು, ಮೇ 9–ಸಿಬಿಐ ನ್ಯಾಯಾಲಯದಿಂದ ಶಿಕ್ಷೆಗೆ ಒಳಗಾಗಿರುವ ಮಾಜಿ ಸಚಿವ ಮತ್ತು ಗಂಗಾವತಿ ವಿಧಾನಸಭಾ ಕ್ಷೆ?ತ್ರದ ಚುನಾಯಿತ ಪ್ರತಿನಿಧಿಯಾಗಿದ್ದ ಜಿ. ಜನಾರ್ದನ ರೆಡ್ಡಿ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಲಾಗಿದೆ.**

**ಜನಾರ್ದನರೆಡ್ಡಿ ಅವರ ಶಾಸಕಸ್ಥಾನ ಅನರ್ಹಗೊಂಡಿರುವ ಹಿನ್ನೆಲೆಯಲ್ಲಿ ಗಂಗಾವತಿ ವಿಧಾನಸಭಾ ಕ್ಷೆ?ತ್ರದ ಸದಸ್ಯ ಸ್ಥಾನ ತೆರವಾಗಿದೆ ಎಂದು ವಿಧಾನಸಭೆಯು ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಸಿಬಿಐ ನ್ಯಾಯಾಲಯವು ಶಿಕ್ಷೆ ಪ್ರಕಟಿಸಿರುವ ಮೇ 6ರಿಂದ ಜಾರಿಗೆ ಬರುವಂತೆ ಜನಾರ್ದನರೆಡ್ಡಿ ಅವರು ವಿಧಾನಸಭೆಯ ಸದಸ್ಯತ್ವದಿಂದ ಅನರ್ಹರಾಗಿದ್ದಾರೆ. ಸಿಬಿಐ ನ್ಯಾಯಾಲಯದ ಆದೇಶಕ್ಕೆ ನ್ಯಾಯಾಲಯದಿಂದ ತಡೆಯಾಜ್ಞೆ ಸಿಗುವವರೆಗೂ ಶಾಸಕತ್ವದ ಅನರ್ಹತೆ ಮುಂದುವರೆಯುತ್ತದೆ ಎಂದು ಹೇಳಿದ್ದಾರೆ.**

**1951ರ ಪ್ರಜಾ ಪ್ರತಿನಿದಿ ಕಾಯ್ದೆಯ ಸೆಕ್ಷನ್ 8ರ ಹಾಗೂ ಭಾರತ ಸಂವಿಧಾನದ ವಿಧಿ 191(1) (ಇ)ನಿಬಂಧನೆಗಳ ಪ್ರಕಾರ ಜನಾರ್ದನ ರೆಡ್ಡಿ ಅವರು ಜೈಲು ಶಿಕ್ಷೆ ಅನುಭವಿಸಿ ಬಿಡುಗಡೆಯಾದ ನಂತರವೂ 6 ವರ್ಷಗಳ ಕಾಲ ಅವರು ಚುನಾವಣೆಗೆ ಸ್ಪರ್ಧಿಸುವಂತಿಲ್ಲ. ಅಲ್ಲಿಯವರೆಗೆ ಶಾಸಕತ್ವದ ಅನರ್ಹತೆಯು ಮುಂದುವರಿಯುತ್ತದೆ.**

# ಮನೆಗಳ್ಳತನ ಮಾಡಿ ಕಾರು ಖರೀದಿಸಿ ಮೋಜಿನ ಜೀವನ ಮಾಡುತ್ತಿದ್ದ ಆರೋಪಿ ಅರೆಸ್ಟ್



**ಬೆಂಗಳೂರು,ಮೇ.10–** ಕಳವು ಮಾಡಿದ ಆಭರಣಗಳನ್ನು ಅಡವಿಟ್ಟು ಬಂದ ಹಣದಿಂದ ಕಾರು ಖರೀದಿಸಿ ಮೋಜು ಮಾಡುತ್ತಿದ್ದ ಹಳೆ ಮನೆಗಳ್ಳನನ್ನು ಸಂಪಂಗಿರಾಮನಗರ ಠಾಣಾ ಪೊಲೀಸರು ಬಂಧಿಸಿ 40 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ಬೆಳ್ಳಿವಸ್ತುಗಳು, ಕಾರು ಹಾಗೂ ಎರಡು ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಆರೋಪಿ ವಿರುದ್ಧ ಒಟ್ಟು 11 ಪ್ರಕರಣಗಳಿವೆ. ಜನವರಿಯಲ್ಲಿ ಜೈಲಿನಿಂದ ಬಿಡುಗಡೆಯಾಗಿದ್ದ ಈತ ಮತ್ತೆ ಹಳೆ ಚಾಳಿ ಮುಂದುವರೆಸಿದ್ದನು.ಆರೋಪಿಯಿಂದ ಕಳವು ಮಾಲನ್ನು ಸ್ವಿ?ಕರಿಸುತ್ತಿದ್ದ ಚಿನ್ನಬೆಳ್ಳಿ ಕೆಲಸಗಾರನನ್ನು ಪೊಲೀಸರು ಬಂಧಿಸಿದ್ದಾರೆ. ಮತ್ತೊಬ್ಬ ತಲೆಮರೆಸಿಕೊಂಡಿದ್ದು, ಆತನ ಪತ್ತೆ ಕಾರ್ಯ ಮುಂದುವರೆದಿದೆ.

ಒಕ್ಕಲಿಗರ ಭವನದ ಬಳಿಯ ಟೀ ಅಂಗಡಿಯೊಂದರ ಮುಂಭಾಗ ದ್ವಿಚಕ್ರ ವಾಹನದೊಂದಿಗೆ ಅನುಮಾನಸ್ಪದವಾಗಿ ನಿಂತಿದ್ದ ವ್ಯಕ್ತಿಯ ಬಗ್ಗೆ ಪೊಲೀಸರು ವಿಚಾರಿಸಿದಾಗ ದ್ವಿಚಕ್ರ ವಾಹನಕ್ಕೆ ಸಂಬಂಧಿಸಿದ ಯಾವುದೇ ದಾಖಲೆಗಳಿಲ್ಲದಿರುವುದು ಕಂಡುಬಂದಿದೆ.ಈ ವಾಹನವನ್ನು ಸಿಕೆ ಅಚ್ಚುಕಟ್ಟು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳವು ಮಾಡಿರುವುದಾಗಿ ತಿಳಿಸಿದ್ದು, ವಾಹನದ ಡಿಕ್ಕಿಯನ್ನು ಪರಿಶೀಲಿಸಿದಾಗ ಅದರಲ್ಲಿ ಕಬ್ಬಿಣದ ರಾಡು, ಕಟ್ಟರ್, ಸ್ಕ್ರೂ ಡ್ರೈವರ್ ಕಂಡುಬಂದ ಹಿನ್ನೆಲೆಯಲ್ಲಿ ಆತನನ್ನು ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಿದಾಗ ಸಹಚರನೊಂದಿಗೆ ಸೇರಿಕೊಂಡು ಬ್ಯಾಡರಹಳ್ಳಿಯ ಎರಡು ಮನೆಗಳಲ್ಲಿ ಈ ಆಯುಧಗಳನ್ನು ಬಳಸಿ ಚಿನ್ನಾಭರಣ ಕಳವು ಮಾಡಿರುವುದಾಗಿ ತಿಳಿಸಿದ್ದಾನೆ.

ಆರೋಪಿಯನ್ನು ಸುದೀರ್ಘವಾಗಿ ವಿಚಾರಣೆಗೊಳಪಡಿಸಿದಾಗ ಬ್ಯಾಡರಹಳ್ಳಿಯ ಭರತ್‌ನಗರದ ಮನೆಯೊಂದರ ಮೊದಲ ಮಹಡಿ ಹಾಗೂ ಎರಡನೇ ಮಹಡಿ ಮನೆಗಳಲ್ಲಿ ಚಿನ್ನಾಭರಣ ಹಾಗೂ ಬೆಳ್ಳಿ ವಸ್ತುಗಳನ್ನು ಕಳವು ಮಾಡಿರುವುದಲ್ಲದೆ ಚಂದ್ರ ಲೇಔಟ್‌ನಲ್ಲಿ ಒಂದು ದ್ವಿಚಕ್ರ ವಾಹನ ಕಳವು ಮಾಡಿರುವುದಾಗಿ ಹೇಳಿದ್ದಾನೆ.ಕಳವು ಮಾಡಿದ ಚಿನ್ನಾಭರಣಗಳನ್ನು ತುಮಕೂರಿನ ಚಿನ್ನ ಬೆಳ್ಳಿ ಕೆಲಸ ಮಾಡುವ ವ್ಯಕ್ತಿಯೊಬ್ಬನಿಗೆ ಮಾರಾಟ ಮಾಡಿರುವುದಾಗಿ ತಿಳಿಸಿದ್ದಾನೆ. ಅಲ್ಲದೆ ಮಾರಾಟ ಮಾಡಿ ಬಂದ ಹಣದಿಂದ ಸೆಕೆಂಡ್ ಹ್ಯಾಂಡ್ ಕಾರನ್ನು ಖರೀದಿಸಿರುವುದಾಗಿ ವಿಚಾರಣೆ ವೇಳೆ ಬಾಯ್ಬಿಟ್ಟಿದ್ದಾನೆ. ಈತನ ಮಾಹಿತಿ ಮೇರೆಗೆ ಚಿನ್ನಾಭರಣಗಳನ್ನು ಸ್ವಿಕರಿಸುತ್ತಿದ್ದ ಚಿನ್ನ ಬೆಳ್ಳಿ ಕೆಲಸಗಾರನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆಭರಣಗಳನ್ನು ಚಿನ್ನದ ಗಟ್ಟಿಯನ್ನಾಗಿ ಮಾಡಿ 70 ಗ್ರಾಂ ಚಿನ್ನದ ಗಟ್ಟಿಯನ್ನು ತನ್ನ ಬಳಿಯಲ್ಲಿಟ್ಟುಕೊಂಡು 314 ಗ್ರಾಂ ಚಿನ್ನದ ಗಟ್ಟಿಯನ್ನು ತುಮಕೂರಿನಲ್ಲಿರುವ ಜ್ಯೂವೆಲ್ಲರಿ ವರ್ಕ್ಸ್ ಅಂಗಡಿಯಲ್ಲಿಮಾರಾಟ ಮಾಡಿರುವುದಾಗಿ ತಿಳಿಸಿದ್ದಾನೆ.

ಆರೋಪಿ ಆಭರಣಗಳನ್ನು ಮಾರಿ ಖರೀದಿಸಿದ್ದ ಕಾರಿನ ಬಗ್ಗೆ ವಿಚಾರಿಸಿ, ಜ್ಞಾನಭಾರತಿ ಸಂಚಾರಿ ಪೊಲೀಸ್ ಠಾಣೆ ಮುಂಭಾಗದ ರಸ್ತೆಯ ಪಕ್ಕದ ಖಾಲಿ ಜಾಗದಲ್ಲಿ ನಿಲ್ಲಿಸಿದ್ದ ಕಾರನ್ನು ಪರಿಶೀಲಿಸಿ ಅದರಲ್ಲಿದ್ದ 107.63 ಗ್ರಾಂ ಬೆಳ್ಳಿ ವಸ್ತುಗಳು ಹಾಗೂ ಚಿನ್ನದಂತಿರುವ 78.13 ಗ್ರಾಂ ರೋಲ್‌ಗೋಲ್ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.ತುಮಕೂರಿನ ಜ್ಯೂವೆಲ್ಲರಿ ವರ್ಕ್ ಅಂಗಡಿ ಮಾಲೀಕನಿಂದ 200 ಗ್ರಾಂ 3 ಚಿನ್ನದ ಗಟ್ಟಿಗಳನ್ನು ಹಾಗೂ 114 ಗ್ರಾಂ 2 ಚಿನ್ನದ ಗಟ್ಟಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.ಅಲ್ಲದೆ, ತುಮಕೂರಿನ ಚಿನ್ನಬೆಳ್ಳಿ ಕೆಲಸ ಮಾಡುವ ವ್ಯಕ್ತಿಯ ಪತ್ನಿಯು 70 ಗ್ರಾಂ ಚಿನ್ನದ ಗಟ್ಟಿಯನ್ನು ಠಾಣೆಗೆ ತಂದು ಒಪ್ಪಿಸಿದ್ದಾರೆ.

ಒಟ್ಟಾರೆ ಈ ಪ್ರಕರಣದಲ್ಲಿ ಒಟ್ಟು 384 ಗ್ರಾಂ ಚಿನ್ನಾಭರಣಗಳು, 107.63 ಗ್ರಾಂ ಬೆಳ್ಳಿ ವಸ್ತುಗಳು, ಒಂದು ಕಾರು, 2 ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದು, ಇವುಗಳ ಒಟ್ಟು ಮೌಲ್ಯ 40 ಲಕ್ಷ ರೂ.ಗಳೆಂದು ಅಂದಾಜಿಸಲಾಗಿದೆ. ಆರೋಪಿ ಬಂಧನದಿಂದ ಬ್ಯಾಡರಹಳ್ಳಿ ಪೊಲೀಸ್ ಠಾಣೆಯ 2 ಮನೆಕಳವು ಪ್ರಕರಣ, ಸಿಕೆ ಅಚ್ಚುಕಟ್ಟು ಪೊಲೀಸ್ ಠಾಣೆಯ ದ್ವಿಚಕ್ರ ವಾಹನ ಕಳವು ಪ್ರಕರಣ ಹಾಗೂ ಚಂದ್ರ ಲೇಔಟ್ ಪೊಲೀಸ್ ಠಾಣೆಯ ದ್ವಿಚಕ್ರ ವಾಹನ ಕಳವು ಪ್ರಕರಣಗಳು ಸೇರಿ ಒಟ್ಟು 4 ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಇನ್‌ಸ್ಪೆಕ್ಟರ್ ರವಿಕಿರಣ್ ಹಾಗೂ ಸಿಬ್ಬಂದಿ ತಂಡ ಯಶಸ್ವಿಯಾಗಿದ್ದಾರೆ.

# ಭಾರತದ ಡ್ರೋನ್ ದಾಳಿಯಲ್ಲಿ 4 ಪಾಕ್ ಸೈನಿಕರಿಗೆ ಗಾಯ

**ಲಾಹೋರ್,ಮೇ 10–** ಭಾರತ ಹಾಗೂ ಪಾಕಿಸ್ತಾನ ನಡುವೆ ಯುದ್ಧದ ಪರಿಸ್ಥಿತಿ ಉಲ್ಬಣಗೊಂಡಿರುವಂತೆಯೇ ಭಾರತದ ಡ್ರೋನ್ ದಾಳಿಯಲ್ಲಿ ತನ್ನ ನಾಲ್ವರು ಸೈನಿಕರು ಗಾಯಗೊಂಡಿರುವುದಾಗಿ ಪಾಕಿಸ್ತಾನ ಸೇನೆ ಹೇಳಿದೆ.

25 ಭಾರತೀಯ ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ ಎಂದು ಪಾಕ್ ಸೇನೆ ಹೇಳಿಕೆಯಲ್ಲಿ ತಿಳಿಸಿದೆ.ಕಳೆದ ರಾತ್ರಿ ಉತ್ತರ ಮತ್ತು ಪಶ್ಚಿಮ ಭಾರತದಲ್ಲಿ ಹಲವು ಕಡೆ ದಾಳಿ ನಡೆಸುವ ಪಾಕ್ ಸೇನೆಯ ಪ್ರಯತ್ನಗಳನ್ನು ಭಾರತೀಯ ಶಸ್ತ್ರ ಪಡೆಗಳು ವಿಫಲಗೊಳಿಸಿದ್ದು, ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯನ್ನು ನಾಶಪಡಿಸಲಾಗಿದೆ ಎಂದು ನವದೆಹಲಿ ಯಲ್ಲಿ ಭಾರತೀಯ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ.ಅತ್ತ ಇಸ್ಲಾಮಾಬಾದ್‌ನಲ್ಲಿ ಮಾತನಾಡಿದ ಪಾಕಿಸ್ತಾನ ಸೇನೆಯ ವಕ್ತಾರ ಲೆಫ್ಟಿನೆಂಟ್ ಜನರಲ್ ಅಹದ್ ಷರೀಫ್ ಚೌಧರಿ, ಲಾಹೋರ್ ಬಳಿ ಒಂದು ಡ್ರೋನ್ ಪತನಗೊಂಡಿದ್ದು, ದಾಳಿಯ ಪರಿಣಾಮವಾಗಿ ನಾಲ್ವರು ಸೈನಿಕರು ಗಾಯಗೊಂ ಡಿದ್ದಾರೆ.

ಲಾಹೋರ್, ಗುಜ್ರನ್ವಾಲಾ, ಚಕ್ವಾಲ್, ಬಹವಾಲ್ಪುರ್, ಮಿಯಾನೋ, ಕರಾಚಿ, ರಾವಲ್ಪಿಂಡಿ, ಚೋರ್, ಅತ್ವಾಲಾಕ್‌ನಲ್ಲಿ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ಹೇಳಿದ್ದಾರೆ. ಇಲ್ಲಿಯವರೆಗೆ 25 ಇಸ್ರೆಲಿ ನಿರ್ಮಿತ ಹೀರೋಪ್ ಡ್ರೋನ್‌ಗಳನ್ನು ಪಾಕಿಸ್ತಾನಿ ಸೇನೆಯ ಸ್ಟಕಿಲ್ (ತಾಂತ್ರಿಕ) ಮತ್ತು ಹಾರ್ಡ್‌ಕಿಲ್ ಆಯುಧಗಳಿಂದ ಹೊಡೆದುರುಳಿಸಲಾಗಿದೆ ಎಂದು ಪಾಕಿಸ್ತಾನ ಸೇನೆ ಹೇಳಿಕೆಯಲ್ಲಿ ತಿಳಿಸಿದೆ.ಪಹಲ್ಗಾವ್ ಭಯೋತ್ಪಾದಕ ದಾಳಿಯ ನಂತರ, ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

# ಬೆದರಿಸಿ ಹಣ ವಸೂಲಿ ಮಾಡುತ್ತಿದ್ದ ಮೂವರು ಪೋಲಿಸರ ಬಂಧನ



**ಬೆಂಗಳೂರು,ಮೇ.10–** ದಂಧೆಕೋರರನ್ನು ಬೆದರಿಸಿ ಆರು ಲಕ್ಷ ರೂ. ಹಣ ವಸೂಲಿ ಮಾಡಿದ್ದಾರೆಂಬ ಆರೋಪದ ಮೇರೆಗೆ ಚಿಕ್ಕಜಾಲ ಪೊಲೀಸ್ ಠಾಣೆಯ ಮೂವರು ಪೊಲೀಸರನ್ನು ಬಾಗಲೂರು ಠಾಣಾ ಪೊಲೀಸರು ಬಂಧಿಸಿದ್ದಾರೆ.

ಚಿಕ್ಕಜಾಲ ಠಾಣೆಯ ಇಬ್ಬರು ಹೆಡ್‌ಕಾನ್‌ಸ್ಟೆಬಲ್ ಹಾಗೂ ಒಬ್ಬರು ಕಾನ್‌ಸ್ಟೆಬಲ್ ಅನ್ನು ಬಾಗಲೂರು ಠಾಣೆ ಪೊಲೀಸರು ಬಂಧಿಸಿ ವಿಚಾರಣೆಗೊಳಪಡಿಸಿ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ. ಚಿಕ್ಕಜಾಲ ಠಾಣಾ ವ್ಯಾಪ್ತಿಯಲ್ಲಿ ಹಣ ದ್ವಿಗುಣಗೊಳಿಸುವ ದಂಧೆ ನಡೆಯುತ್ತಿದೆ. ಆ ದಂಧೆಕೋರರು ಪ್ರತಿಷ್ಠಿತ ಹೋಟೆಲ್‌ವೊಂದರ ಬಳಿ ಇದ್ದಾರೆಂದು ಪೊಲೀಸ್ ಮಾಹಿತಿದಾರರೊಬ್ಬರು ಈ ಪೊಲೀಸರಿಗೆ ತಿಳಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಚಿಕ್ಕಜಾಲ ಠಾಣೆಯ ಪೊಲೀಸರು ತಕ್ಷಣ ಸ್ಥಳಕ್ಕೆ ಹೋಗಿ ದಂಧೆಕೋರರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿ, ಬೆದರಿಸಿ ಆರು ಲಕ್ಷ ರೂ. ಪಡೆದುಕೊಂಡು ಯಾವುದೇ ಪ್ರಕರಣ ದಾಖಲಿಸಿಕೊಳ್ಳದೆ ಆರೋಪಿಗಳನ್ನು ಬಿಟ್ಟುಕಳುಹಿಸಿದ್ದರು.ಮಾರನೇ ದಿನ ಈ ದಂಧೆಕೋರರು ಬಾಗಲೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 44 ಲಕ್ಷ ರೂ.ಗಳೊಂದಿಗೆ ಹೋಗಿದ್ದಾಗ ಹಣದ ಬ್ಯಾಗ್ ದರೋಡೆಯಾಗಿದೆ. ಈ ಬಗ್ಗೆ ಅವರು ಬಾಗಲೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಾಗ ಈ ಪ್ರಕರಣದಲ್ಲಿ ಚಿಕ್ಕಜಾಲ ಪೊಲೀಸ್ ಠಾಣೆಯ ಪೊಲೀಸರು ಭಾಗಿಯಾಗಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಮಾಹಿತಿಗಳನ್ನು ಕಲೆ ಹಾಕಿ ಮೂವರು ಪೊಲೀಸ್ ಸಿಬ್ಬಂದಿಯನ್ನು ಬಂಧಿಸಿ, 44 ಲಕ್ಷ ರೂ. ದರೋಡೆ ಮಾಡಿರುವ ಆರೋಪಿಗಳಿಗಾಗಿ ಶೋಧ ಮುಂದುವರೆಸಿದ್ದಾರೆ.ಈ ಪ್ರಕರಣ ದಲ್ಲಿ ಇನ್ನೂ ಕೆಲವರನ್ನು ವಶಕ್ಕೆ ಪಡೆದು ವಿಚಾರಣೆ ಗೊಳಪಡಿಸಿದ್ದಾರೆ.

# ಸೇನಾ ಮುಖ್ಯಸ್ಥರೊಂದಿಗೆ ರಕ್ಷಣಾ ಸಚಿವ ರಾಜ್‌ನಾಥ್‌ಸಿಂಗ್ ಸಭೆ



**ನವದೆಹಲಿ, ಮೇ 10–** ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಅವರು ಇಂದು ಬೆಳಗ್ಗೆ ನವದೆಹಲಿಯಲ್ಲಿರುವ ಸೇನಾ ಮುಖ್ಯಸ್ಥ ಅನಿಲ್ ಚೌಹಾಣ್ ಮತ್ತು ಮೂರು ಸೇನಾ ಪಡೆಗಳ ಮುಖ್ಯಸ್ಥರನ್ನು ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದ್ದಾರೆ.

ಪಾಕಿಸ್ತಾನದಿಂದ ಸೇನೆಯ ಕೇಂದ್ರಗಳು ಮತ್ತು ಇತರ ನಗರಗಳಿಗೆ ಗುರಿಯಾಗಿಸಿದ್ದಮಿಸ್ಸೈಲ್ ಮತ್ತು ಡ್ರೋನ್ ದಾಳಿಗಳನ್ನು ನಿರೋಧಿಸಿದ ಕೆಲ ಗಂಟೆಗಳ ಬಳಿಕ ಅವರು ಸೇನಾ ಮುಖ್ಯಸ್ಥರುಗಳನ್ನು ಭೇಟಿ ಮಾಡಿ ಚರ್ಚೆ ನಡೆಸುತ್ತಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಹಳ್ಳಿಯ ದಾಳಿಗಳ ನಂತರ ಭದ್ರತಾ ಪರಿಸ್ಥಿತಿಯನ್ನು ಅಂದಾಜಿಸುವುದಕ್ಕಾಗಿ ಸಭೆಯನ್ನು ಏರ್ಪಡಿಸಲಾಗಿತ್ತು.ಭಾರತವು ರಾಜಸ್ಥಾನ್, ಗುಜರಾತ್ ಮತ್ತು ಪಂಜಾಬ್‌ನಲ್ಲಿ ಆರಂಭವಾದ ಪಾಕಿಸ್ತಾನದ ವಾಯು ದಾಳಿಯ ಎರಡನೇ ಹಂತವನ್ನು ತಡೆಹಿಡಿಯಲಾಗಿದೆ.

ಪಾಕಿಸ್ತಾನವು ಜಮ್ಮು, ಪಠಾಣಕೋಟ್ ಮತ್ತು ಉದಮ್‌ಂಪುರದಲ್ಲಿ ಸೇನಾ ಕೇಂದ್ರಗಳನ್ನು ಗುರಿಯಾಗಿಸಿಕೊಂಡಿದ್ದು, ಭಾರತೀಯ ಸೇನೆ ತಕ್ಷಣ ನಿರೋಧಿಸಿ ಪ್ರತಿಯಾಗಿ ಪ್ರಯತ್ನಿಸಿತು.ರಾತ್ರಿ ಶ್ರೀನಗರ, ಜಮ್ಮು ಮತ್ತು ಪಂಜಾಬ್ ಹಾಗೂ ರಾಜಸ್ಥಾನದ ಹಲವಾರು ಸ್ಥಳಗಳಿಂದ ಭಾರೀ ಬ್ಲಾಕ್‌ಔಟ್ ವರದಿಯಾಗಿತ್ತು.

ಯುವ ಮಾರ್ಗ

ಶನಿವಾರ: 10–05–2025

# ಭಾರತ–ಪಾಕ್ ನಡುವೆ ಯುದ್ಧ ಭೀತಿ, ತಾತ್ಕಾಲಿಕವಾಗಿ ಎಲ್ಲಾ ಐಪಿಎಲ್ ಪಂದ್ಯಗಳು ರದ್ದು




**ನವದೆಹಲಿ, ಮೇ–10** ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಆವರಿಸಿರುವ ಹಿನ್ನೆಲೆಯಲ್ಲಿ ಪ್ರೇಕ್ಷಕರ ಹಾಗೂ ಆಟಗಾರರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಪ್ರೀಮಿಯರ್ ಲೀಗ್ ( ಐಪಿಎಲ್) ನ ಮುಂದಿನ ಎಲ್ಲಾ ಹಂತದ ಪಂದ್ಯಗಳನ್ನು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ತಾತ್ಕಾಲಿಕವಾಗಿ ಅಮಾನತುಪಡಿಸುವ ಮಹತ್ವದ ತೀರ್ಮಾನವನ್ನು ತೆಗೆದುಕೊಂಡಿದೆ.ಕಳೆದ ರಾತ್ರಿ ಪಾಕಿಸ್ತಾನ ಭಾರತದ ಮೂರು ಗಡಿ ರಾಜ್ಯಗಳನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿ ನಡೆಸಿತ್ತು. ಹೀಗಾಗಿ ಹಿಮಚಾಲ ಪ್ರದೇಶದಲ್ಲಿ ನಡೆಯುತ್ತಿದ್ದ ದೆಹಲಿ ಹಾಗೂ ಪಂಜಾಬ್ ನಡುವಿನ ಪಂದ್ಯವನ್ನು ರದ್ದುಪಡಿಸಲಾಗಿತ್ತು. ಐಪಿಎಲ್ ಪಂದ್ಯ ನಡೆಯುವ ವೇಳೆ ಪಾಕ್ ನ ಆತ್ಮಾಹುತಿ ದಾಳಿ ಇಲ್ಲವೇ ಡ್ರೋನ್ ದಾಳಿ ನಡೆಯುವ ಸಾಧ್ಯತೆ ಇದೆ ಎಂದು ಬಿಸಿಸಿಐಗೆ ಕೇಂದ್ರ ಗುಪ್ತಚರ ವಿಭಾಗ ಎಚ್ಚರಿಕೆ ಕೊಟ್ಟಿತ್ತು. ಹೀಗಾಗಿ ಇಂದು ತುರ್ತು ಸಭೆ ನಡೆಸಿದ ಬಿಸಿಸಿಐ ಬಾಕಿ ಉಳಿದಿರುವ 16 ಐಪಿಎಲ್ ಪಂದ್ಯಗಳನ್ನು ತಾತ್ಕಾಲಿಕವಾಗಿ ಅಮಾನತುಪಡಿಸಲಾಗಿದೆ ಎಂದು ಘೋಷಣೆ ಮಾಡಿತು.

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಟೂರ್ನಮೆಂಟ್ ಅಧಿಕಾರಿಗಳೊಂದಿಗೆ ತುರ್ತು ಸಭೆಯ ನಂತರ ಆಟಗಾರರು, ಸಹಾಯಕ ಸಿಬ್ಬಂದಿ ಮತ್ತು ಅಭಿಮಾನಿಗಳ ಸುರಕ್ಷತೆಯನ್ನು ಪ್ರಾಥಮಿಕ ಕಾಳಜಿ ಎಂದು ಉಲ್ಲೇಖಿಸಿದೆ. ದೇಶವು ಯುದ್ಧದಲ್ಲಿರುವಾಗ ಕ್ರಿಕೆಟ್ ನಡೆಯುತ್ತಿರುವುದು ಚೆನ್ನಾಗಿ ಕಾಣುತ್ತಿಲ್ಲ ಎಂದು ಬಿಸಿಸಿಐ ಅಧಿಕಾರಿಯೊಬ್ಬರು ಹೇಳಿದ್ದಾರೆ. ಮೇ 25 ರಂದು ಕೋಲ್ಕತ್ತಾದಲ್ಲಿ ಮುಕ್ತಾಯಗೊಳ್ಳಬೇಕಿದ್ದ ಋತುವಿನ ಉಳಿದ ಪಂದ್ಯಗಳನ್ನು ತಾತ್ಕಾಲಿಕವಾಗಿ ಅಮಾನತು ಗೊಳಿಸಲಾಗಿದೆ.ಇದಕ್ಕೂ ಮೊದಲು, ಮೇ.8 ರಂದು ಧರ್ಮಶಾಲಾದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಪಂದ್ಯವನ್ನು ಹತ್ತಿರದ ಜಮ್ಮು ಮತ್ತು ಪಠಾಣ್ ಕೋಟ್ನಲ್ಲಿ ವಾಯು ದಾಳಿ ಎಚ್ಚರಿಕೆಯ ಕಾರಣ ಮಧ್ಯದಲ್ಲಿಯೇ ಸ್ಥಗಿತಗೊಳಿಸಲಾಯಿತು. ಸಂಭಾವ್ಯ ದಾಳಿಯ ನಡುವೆ ವೀಕ್ಷಕರನ್ನು ಸ್ಥಳಾಂತರಿಸಲಾಗಿತ್ತು.ಮೇ 9 ರಂದು ಲಕ್ನೋ ಸೂಪರ್ ಜೈಂಟ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯವು ಯೋಜಿಸಿದಂತೆ ಮುಂದುವರಿಯುತ್ತದೆ ಎಂದು ಐಪಿಎಲ್ ಚೇರ್ಮನ್ ಅರುಣ್ ಧುಮಾಲ್ ಸೂಚಿಸಿದರೂ, ಹದಗೆಡುತ್ತಿರುವ ಭದ್ರತಾ ಪರಿಸ್ಥಿತಿಯ ಕಾರಣ, ಬಿಸಿಸಿದ ಪಂದ್ಯಗಳನ್ನು ತಾತ್ಕಾಲಿಕವಾಗಿ ಅಮಾನತುಪಡಿಸುವುದೇ ಸೂಕ್ತ ಎಂಬ ಒಮ್ಮತದ ತೀರ್ಮಾನಕ್ಕೆ ಬರಲಾಯಿತು.

ಮುಂದಿನ ಸೂಚನೆ ಬರುವವರೆಗೂ ಲೀಗ್ ಅನ್ನು ಅಮಾನತು ಗೊಳಿಸಲಾಗಿದೆ ಮತ್ತು ಅಧಿಕೃತ ನಿರ್ದೇಶನಗಳಿಗಾಗಿ ಕಾಯುತ್ತಿರುವಾಗ ಅಧಿಕಾರಿಗಳೊಂದಿಗೆ ನಿಕಟವಾಗಿ ಸಮನ್ವಯ ಸಾಧಿಸುತ್ತಿದೆ ಎಂದು ಬಿಸಿಸಿಐನ ಹಿರಿಯ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ.ಈ ನಿರ್ಧಾರವು ಸಾಗರೋತ್ತರ ಕ್ರಿಕೆಟ್ ಮಂಡಳಿಗಳ ಗಮನವನ್ನೂ ಸೆಳೆದಿದೆ. ಹಲವಾರು ಅಂತಾರಾಷ್ಟ್ರೀಯ ಆಟಗಾರರು ಮತ್ತು ತರಬೇತುದಾರರು ಭಾಗಿಯಾಗಿರುವುದರಿಂದ, ಕ್ರಿಕೆಟ್ ಆಸ್ಟ್ರೇಲಿಯಾ ಶುಕ್ರವಾರ ಹೇಳಿಕೆಯನ್ನು ಬಿಡುಗಡೆ ಮಾಡಿದ್ದು, ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಭಾರತದಲ್ಲಿನ ತನ್ನ ಸಿಬ್ಬಂದಿಗಳೊಂದಿಗೆ ಸಂಪರ್ಕದಲ್ಲಿರುವುದಾಗಿ ಹೇಳಿದೆ.ಆಟಗಾರರನ್ನು ಮತ್ತು ಸಿಬ್ಬಂದಿಯನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ರೈಲಿನ ವ್ಯವಸ್ಥೆ ಮಾಡಲಾಗಿದೆ. ರೈಲ್ವೆ ಸಚಿವರೊಂದಿಗೆ ಮಾತನಾಡಿದ್ದೇವೆ. ಆಟಗಾರರು ರೈಲಿನ ಮೂಲಕ ಡೆಲ್ಲಿಗೆ ತೆರಳುವ ಸಾಧ್ಯತೆಯಿದೆ. ಅಲ್ಲದೇ ಪಾಕ್‌ನಲ್ಲಿ ನಡೆಯುತ್ತಿದ್ದ ಪಾಕಿಸ್ತಾನ್ ಸೂಪರ್ ಲೀಗ್‌ನ ಉಳಿದ ಎಲ್ಲಾ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸಲು ಪಿಸಿಬಿ ನಿರ್ಧಾರ ಕೈಗೊಂಡಿದೆ.

ಏ. 22 ರಂದು ಕಾಶ್ಮೀರದ ಪಹಲ್ಗಾಮ್ ನಲ್ಲಿ ಉಗ್ರರು ದಾಳಿ ನಡೆಸಿದ್ದು, ಈ ದಾಳಿಯಲ್ಲಿ 26 ಮಂದಿ ಮೃತಪಟ್ಟಿದ್ದರು. ಇದಕ್ಕೆ ಪ್ರತೀಕಾರವಾಗಿ ಭಾರತ ಪಾಕ್ ಉಗ್ರರ 9 ಅಡಗುತಾಣಗಳ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ತಕ್ಕ ಉತ್ತರ ನೀಡಿತ್ತು.ಪಹಲ್ಗಾಮ್ ಉಗ್ರ ದಾಳಿ ಬೆನ್ನಲ್ಲೇ ಪಾಕ್ ವಿರುದ್ಧ ಪ್ರತೀಕಾರಕ್ಕೆ ಮುಂದಾಗಿರುವ ಭಾರತ ಅಪರೇಷನ್ ಸಿಂಧೂರ್ ಹೆಸರಿನಲ್ಲಿ ಪಾಕಿಸ್ತಾನದ 9 ಕಡೆ ಕ್ಷಿಪಣಿ ದಾಳಿ ನಡೆಸಿ ಉಗ್ರರ ಅಡುಗುತಾಣಗಳನ್ನು ಧ್ವಂಸಗೊಳಿಸಿತ್ತು. ಇದರ ಬೆನ್ನಲ್ಲೇ ಭಾರತದ ವಿರುದ್ಧ ಸೇಡು ತೀರಿಸಿಕೊಳ್ಳುವ ಮಾತುಗಳನ್ನು ಆಡಿರುವ ಪಾಕಿಸ್ತಾನ ಜಮ್ಮು ಮತ್ತು ಕಾಶ್ಮೀರ, ರಾಜಸ್ಥಾನ ಮತ್ತು ಪಂಜಾಬ್ ಸೇರಿದಂತೆ ಭಾರತದ ಹಲವು ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಕ್ಷಿಪಣಿ ದಾಳಿ ನಡೆಸಿದೆ. ಭಾರತೀಯ ಸೇನೆಯೂ ಕೂಡ ಇದಕ್ಕೆ ದಿಟ್ಟ ಪ್ರತಿಕ್ರಿಯೆ ನೀಡುತ್ತಿದೆ.ಐಪಿಎಲ್ ಲೀಗ್ ಹಂತದಲ್ಲಿ ಇನ್ನೂ 12 ಪಂದ್ಯಗಳು ಬಾಕಿ ಇವೆ. ಲಕ್ನೋ, ಹೈದರಾಬಾದ್, ಅಹಮದಾಬಾದ್, ದೆಹಲಿ, ಚೆನ್ನೈ, ಬೆಂಗಳೂರು, ಮುಂಬೈ ಮತ್ತು ಜೈಪುರ ನಗರಗಳಲ್ಲಿ ಉಳಿದ ಪಂದ್ಯಗಳು ನಡೆಯಲಿವೆ. ಇವುಗಳಲ್ಲಿ ಮೂರು ಪಂದ್ಯಗಳು ಅಹಮದಾಬಾದ್ ನಲ್ಲಿ ತಲಾ ಎರಡು ಪಂದ್ಯಗಳು ಲಕ್ನೀ ಮತ್ತು ಬೆಂಗಳೂರಿನಲ್ಲಿ ಮತ್ತು ತಲಾ ಒಂದು ಪಂದ್ಯ ಹೈದರಾಬಾದ್, ದೆಹಲಿ, ಚೆನ್ನೈ ಮುಂಬೈ ಮತ್ತು ಜೈಪುರದಲ್ಲಿ ನಡೆಯಬೇಕಿತ್ತು.ಪ್ಲೇಆಫ್‌ಗಳ ಭಾಗವಾಗಿ, ಕ್ವಾಲಿಫೈಯರ್ ಮತ್ತು ಎಲಿಮಿನೇಟರ್–1 ಪಂದ್ಯಗಳು ಹೈದರಾಬಾದ್‌ನಲ್ಲಿ ನಡೆಯಲಿದ್ದು, ಎಲಿಮಿನೇಟರ್–2 ಮತ್ತು ಅಂತಿಮ ಪಂದ್ಯ ಕೋಲ್ಕತ್ತಾದಲ್ಲಿ ನಡೆಯಬೇಕಿತ್ತು. ಇದೇ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ, ಸದ್ಯದ ಪರಿಸ್ಥಿತಿ ಆಧರಿಸಿ ನಾವು ಪಂದ್ಯಾವಳಿಯ ಭವಿಷ್ಯದ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತೇವೆ. ನಮಗೆ ಎಲ್ಲಕ್ಕಿಂತ ಆಟಗಾರರ ಸುರಕ್ಷತೆ ಮುಖ್ಯ. ಭದ್ರತಾ ಕಾರಣಗಳಿಂದಾಗಿ ಪಂಜಾಬ್ –ದೆಹಲಿ ಪಂದ್ಯವನ್ನು ಮುಂದುವರಿಸಲು ನಮಗೆ ಸಾಧ್ಯವಾಗಲಿಲ್ಲ ಎಂದು ಹೇಳಿದ್ದಾರೆ.

ಮತ್ತೊಂದೆಡೆ, ಐಪಿಎಲ್ ಅನ್ನು ವಿದೇಶಕ್ಕೆ ಸ್ಥಳಾಂತರಿಸಬಹುದು ಎಂಬ ವರದಿಯೂ ಇತ್ತು. 2009ರಲ್ಲಿ ಸಾರ್ವತ್ರಿಕ ಚುನಾವಣೆಗಳ ಕಾರಣದಿಂದಾಗಿ ಐಪಿಎಲ್ ಅನ್ನು ದಕ್ಷಿಣ ಆಫ್ರಿಕಾದಲ್ಲಿ ನಡೆಸಲಾಗಿತ್ತು. 2014ರಲ್ಲೂ ಕೆಲ ಪಂದ್ಯಗಳನ್ನು ಯುಎಇಯಲ್ಲಿ ನಡೆಸಲಾಗಿತ್ತು. ಕೊರೋನಾದಿಂದಾಗಿ 2020ರ ಲೀಗ್ ಅನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿತ್ತು. 2021ರಲ್ಲಿ ಕೆಲ ಪಂದ್ಯಗಳನ್ನು ಯುಎಇಯಲ್ಲಿ ಆಯೋಜಿಸಲಾಗಿತ್ತು.

# ಮದರಸಾ ನಿರ್ಮಾಣಕ್ಕೆ ಡಿಸಿ ಹೊರಡಿಸಿದ್ದ ಆದೇಶಕ್ಕೆ ಹೈಕೋರ್ಟ್ ತಡೆ



**ಮೈಸೂರು,ಮೇ.10–** ಮೈಸೂರಿನ ಕ್ಯಾತಮಾರನಹಳ್ಳಿ ವಿವಾದಿತ ಜಾಗದಲ್ಲಿ ಮದರಸಾ ಮಾಡಲು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಅನುಮತಿ ನೀಡಿ ಹೊರಡಿಸಿದ್ದ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ.

ಕ್ಯಾತಮಾರನಹಳ್ಳಿ ವಿವಾದಿತ ಜಾಗದಲ್ಲಿ ಮದರಸಾ ಮಾಡಲು ಅನುಮತಿ ನೀಡಿ ಹೊರಡಿಸಿದ್ದ ಆದೇಶಕ್ಕೆ ಹೈ ಕೋರ್ಟ್ ತಡೆ ನೀಡಿದ್ದು ಯಥಾಸ್ಥಿತಿ ಕಾಪಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದೆ.ಈ ಕುರಿತು ಮಾಹಿತಿ ಹಂಚಿಕೊಂಡಿರುವ ವಕೀಲ ಅ.ಮ ಭಾಸ್ಕರ್, ಈಗಾಗಲೇ ವಿವಾದಿತ ಜಾಗದ ವಿಚಾರಕ್ಕೆ ಕೊಲೆ ಆಗಿದೆ. ಅಲ್ಲದೆ ಮದರಸಾ ಮಾಡಲು ಸ್ಥಳೀಯರ ವಿರೋಧವಿದೆ. ವಿವಾದಿತ ಜಾಗ ವಸತಿ ಪ್ರದೇಶವಾಗಿದ್ದು, ಅಲ್ಲಿ ನರ್ಸರಿ ಅರೇಬಿಕ್ ಶಾಲೆ ತೆರೆಯಲು ಡಿಸಿ ಲಕ್ಷ್ಮೀಕಾಂತ್ ರೆಡ್ಡಿ ಅನುಮತಿ ನೀಡಿದ್ದರು. ಸದ್ಯ ಹೈಕೋರ್ಟ್ ಡಿಸಿ ಅವರ ಆದೇಶಕ್ಕೆ ಮಧ್ಯಂತರ ತಡೆ ನೀಡಿದೆ ಎಂದು ತಿಳಿಸಿದರು.

**ಸಂತಸ ಹಂಚಿಕೊಂಡ ಕ್ಯಾತಮಾರನಹಳ್ಳಿ ಗ್ರಾಮಸ್ಥರು:** ಹಂಚಿಕೊಂಡ ಕ್ಯಾತಮಾರನಹಳ್ಳಿ ಗ್ರಾಮಸ್ಥರು, ವಿವಾದಿತ ಸ್ಥಳದಲ್ಲಿ ಮದರಸ ನಡೆಸದಂತೆ ಹೈಕೋರ್ಟ್ ತಡೆ ನೀಡಿ ಯಥಾಸ್ಥಿತಿ ಕಾಪಾಡಿಕೊಂಡು ಹೋಗಲು ಸೂಚನೆ ನೀಡಿದೆ. ಇದು ನಮಗೆ ಮೊದಲ ಹಂತದ ಜಯ. ಯಾವುದೇ ಕಾರಣಕ್ಕೂ ಅಲ್ಲಿ ಮದರಸ ತೆರೆಯಬಾರದು. ಈಗಾಗಲೇ ಅದು ಸೂಕ್ಷ್ಮ ಪ್ರದೇಶವಾಗಿದೆ. ಕೋರ್ಟ್ ಆದೇಶವನ್ನ ನಾವು ಗೌರವಿಸುತ್ತೇವೆ ಮತ್ತು ಪಾಲಿಸುತ್ತೇವೆ. ಮುಂದೆ ಏನಾಗುತ್ತದೋ ಅದಕ್ಕೆ ನಮ್ಮ ವಕೀಲರಿದ್ದಾರೆ. ಕಾನೂನು ಹೋರಾಟ ಮುಂದುವರೆಸುತ್ತೇವೆ ಎಂದು ತಿಳಿಸಿದರು.

# ಸೇತುವೆಕಾಮಗಾರಿಗಾಗಿ ಥಾಣೆ–ವಾಶಿ ಮಾರ್ಗದಲ್ಲಿ ಸ್ಥಳೀಯ ರೈಲು ಸೇವೆ ಸ್ಥಗಿತ, ಪ್ರಯಾಣಿಕರ ಪರದಾಟ



**ಮುಂಬೈ,ಮೇ.10–**ಕೇಂದ್ರ ರೈಲ್ವೆಯಿಂದ ಥಾಣೆ ಮತ್ತು ವಾಶಿ ನಡುವಿನ ಸ್ಥಳೀಯ ರೈಲು ಸೇವೆಗಳನ್ನು ಸ್ಥಗಿತಗೊಳಿಸಿದ ಕಾರಣ ಸಾವಿರಾರು ಪ್ರಯಾಣಿಕರು ಪರದಾಡಿದ್ದಾರೆ. ಥಾಣೆ ಮತ್ತು ಐರೋಲಿ ನಿಲ್ದಾಣಗಳ ನಡುವೆ ಹೊಸದಾಗಿ ನಿರ್ಮಿಸಲಾಗುತ್ತಿರುವ ಸೇತುವೆಗಾಗಿ ಕಾಮಗಾರಿ ಪ್ರಾರಂಭಿಸಲಾಗಿದ್ದು ಇದರಲ್ಲಿ ಸಮಸ್ಯೆ ಕಂಡುಬಂದಿದೆ.

ಥಾಣೆ ಮತ್ತು ನವಿ ಮುಂಬೈ ನಡುವಿನ ಮಾರ್ಗದಲ್ಲಿನ ಎಲ್ಲಾ ಉಪನಗರ ಸೇವೆಗಳನ್ನು ಹಠಾತ್ತನೆ ಸ್ಥಗಿತಗೊಳಿಸುವುದರಿಂದ ತಮ್ಮ ಕೆಲಸದ ಸ್ಥಳಗಳನ್ನು ತಲುಪಲು ಬಸ್‌ಗಳು ಮತ್ತು ಆಟೋಗಳು ಸೇರಿದಂತೆ ಇತರ ಸಾರಿಗೆ ವಿಧಾನಗಳನ್ನು ಹುಡುಕಬೇಕಾಯಿತು .ಉಪನಗರ ರೈಲುಗ ಳನ್ನು ಮುಂಬೈನ ಜೀವನಾಡಿ ಎಂದು ಪರಿಗಣಿಸಲಾಗಿದೆ.ಮುಂಬೈ ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ಹೊಸ ಏರೋಲಿ–ಕಟ್ಟೆ ನಾಕಾ ಸಂಪರ್ಕ ರಸ್ತೆಗಾಗಿ ಇಂದು ಮುಂಜಾನೆ 1 ರಿಂದ 4 ಗಂಟೆಯ ನಡುವೆ ಕೆಲ ಕಾಮಗಾರಿ ಪ್ರಾರಂಭಿಸಿದೆ ಎಂದು ರೈಲ್ವೆ ವಕ್ತಾರರು ತಿಳಿಸಿದ್ದಾರೆ.

ಒಂದು ಕಡೆ ಹಂಬಿ ಓರೆಯಾಗಿರುವುದು ಗಮನಕ್ಕೆ ಬಂದಿದೆ. ಪ್ರಯಾಣಿಕರ ಸುರಕ್ಷತೆಯನ್ನು ಪರಿಗಣಿಸಿ, ಉಪನಗರ ಸೇವೆಗಳನ್ನು ಬೆಳಿಗ್ಗೆ 7.10 ರಿಂದ ಸ್ಥಗಿತಗೊಳಿಸಲಾಗಿದೆ ಎಂದು ರೈಲ್ವೆ ಅಧಿಕಾರಿ ತಿಳಿಸಿದ್ದಾರೆ. ಪುನಃಸ್ಥಾಪನೆ ಕಾರ್ಯಕ್ಕಾಗಿ ಪ್ರಾರಂಭವಾಯಿತು, ಮುಂದಿನ ಕೆಲ ಗಂಟೆಯಲ್ಲಿ ಕೆಲಸ ಪೂರ್ಣಗೊಳ್ಳಲಿದೆ ಎಂದು ವಕ್ತಾರರು ತಿಳಿಸಿದ್ದಾರೆ.

# ಭೂವ್ಯಾಜ್ಯ, ಸಿವಿಲ್ ತಗಾದೆಗಳಲ್ಲಿ ಪೊಲೀಸರು ಮಧ್ಯಪ್ರವೇಶಿಸಿದರೆ ನಿರ್ದಾಕ್ಷಿಣ್ಯ ಕ್ರಮ : ದಯಾನಂದ ಎಚ್ಚರಿಕೆ



**ಬೆಂಗಳೂರು, ಮೇ.10–** ಭೂವ್ಯಾಜ್ಯ, ಸಿವಿಲ್ ತಗಾದೆಗಳಲ್ಲಿ ಪೊಲೀಸ್ ಅಧಿಕಾರಿಗಳು ಅಥವಾ ಸಿಬ್ಬಂದಿಗಳು ಭಾಗಿಯಾಗಿರುವ ದೂರುಗಳು ಕಂಡುಬಂದರೆ ಅವರುಗಳ ವಿರುದ್ಧ ಕಟ್ಟುನಿಟ್ಟಾಗಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಎಚ್ಚರಿಕೆ ನೀಡಿದರು.

ನಗರದ ಆಡುಗೋಡಿಯ ಸಿಎಆರ್ ಕವಾಯತು ಮೈದಾನದಲ್ಲಿ ಇಂದು ಏರ್ಪಡಿಸಿದ್ದ ಮಾಸಿಕ ಸೇವಾ ಕವಾಯತಿನಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ 2–3 ಪ್ರಕರಣಗಳು ಪೊಲೀಸರ ವಿರುದ್ಧವೇ ದಾಖಲಾಗಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಪೊಲೀಸ್ ಸಿಬ್ಬಂದಿಗಳು, ಅಧಿಕಾರಿಗಳು ಶಿಸ್ತು ಸಂಯಮಕ್ಕೆ ಚ್ಯುತಿ ಬಾರದಂತೆ ಹದ್ದುಬಸ್ತಿನ ಕಾರ್ಯನಿರ್ವಹಣೆಗೆ ಹಿರಿಯ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಠಾಣೆಗಳಲ್ಲಿ ತಮ್ಮ ಸಿಬ್ಬಂದಿಗಳ ಕಾರ್ಯನಿರ್ವಹಣೆ ಮತ್ತು ಚಟುವಟಿಕೆಗಳ ಮೇಲೆ ಇನ್ ಸ್ಪೆಕ್ಟರ್‌ಗಳು, ಎಸಿಪಿಗಳು ನಿಗಾ ವಹಿಸಬೇಕು. ಅನೈತಿಕ ಹಾಗೂ ಅಕ್ರಮ ಚಟುವಟಿಕೆಗಳು ನಡೆಯದಂತೆ ಹಾಗೂ ಅದರಲ್ಲಿ ಭಾಗವಹಿಸದಂತೆ ಕಟ್ಟುನಿಟ್ಟಿನ ಎಚ್ಚರಿಕೆ ವಹಿಸುವಂತೆ ಆದೇಶಿಸಿದರು.

ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುವುದು ಕಂಡುಬಂದರೆ ಅದಕ್ಕೆ ಆಯಾ ವ್ಯಾಪ್ತಿಯ ಹಿರಿಯ ಅಧಿಕಾರಿಗಳನ್ನೇ ಹೊಣೆ ಮಾಡಲಾಗುತ್ತದೆ. ಹದ್ದುಬಸ್ತಿನ ಪೊಲೀಸ್‌ಗಿರಿಗೆ ಎಲ್ಲರೂ ಬದ್ದರಾಗಿ ನಡೆದುಕೊಳ್ಳಬೇಕು ಎಂದರು.ಬೆಂಗಳೂರು ನಗರದಲ್ಲಿ ಅಪರಾಧ ಕೃತ್ಯಗಳು ಇಳಿಮುಖವಾಗುತ್ತಿವೆ. ಅದರಲ್ಲೂ ಮನೆ ಹಾಗೂ ವಾಹನಗಳ ಕಳ್ಳತನದಂತಹ ಪ್ರಕರಣಗಳು ತಗ್ಗಿವೆ. ಪೊಲೀಸ್ ಠಾಣೆಗಳಲ್ಲಿ ಅಹವಾಲು ಸ್ವೀಕಾರ, ರಾತ್ರಿ ಗಸ್ತು ಹೆಚ್ಚಳ, ನಾಕಾ ಬಂಧಿ ಆಯೋಜಿಸಿದ್ದರಿಂದಾಗಿ ಅಪರಾಧ ಕೃತ್ಯಗಳು ತಗ್ಗಿವೆ ಎಂದು ಹೇಳಿದರು.

ಸೈಬರ್ ಅಪರಾಧಗಳಲ್ಲೂ ಗಣನೀಯ ಇಳಿಕೆ ಕಂಡುಬಂದಿವೆ. ಕಳೆದ 2 ವರ್ಷಗಳಿಂದ ಸಾರ್ವಜನಿಕರಲ್ಲಿ ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ. ಡಿಜಿಟಲ್ ಡಿಸ್‌ಪ್ಲೇ, ಆಡಿಯೊ ಸಂದೇಶ, ವಿಡಿಯೊ ಮಾಹಿತಿಗಳು ಸೈಬರ್ ಅಪರಾಧಗಳು ತಗ್ಗಲು ಕಾರಣವಾಗಿವೆ ಎಂದು ಆಯುಕ್ತರು ಪ್ರಶಂಸಿಸಿದರು.ಅಪರಾಧ ಪತ್ತೆ ಕಾರ್ಯಾಚರಣೆ ಮತ್ತಷ್ಟು ಚುರುಕುಗೊಳ್ಳಬೇಕು ಎಂದು ಆಯುಕ್ತರು ಇದೇ ಸಂದರ್ಭದಲ್ಲಿ ಅವರು ಒತ್ತಿ ಹೇಳಿದರು. ಉತ್ತಮ ಕಾರ್ಯಕ್ಷಮತೆ ಪ್ರದರ್ಶಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದರು.

# ಭಾರತ ಭಯೋತ್ಪಾದಕರೊಂದಿಗೆ ಯುದ್ಧ ಮಾಡುತ್ತಿದೆ ; ವಿನಯ್ ಕ್ವಾತ್ರಾ



**ವಾಷಿಂಗ್ಟನ್, ಮೇ 10–** ಕಾಶ್ಮೀರದಲ್ಲಿ ಪಾಕಿಸ್ತಾನದ ಭಯೋತ್ಪಾದನೆಯ ಬಗ್ಗೆ ಮಾತನಾಡಿದ ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್ ಕ್ವಾತ್ರಾ ಅವರು, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಉಭಯ ದೇಶಗಳ ನಡುವೆ ಉದ್ವಿಗ್ನತೆ ಹೆಚ್ಚಾದ ಕಾರಣ ಭಾರತವು ಭಯೋತ್ಪಾದಕರೊಂದಿಗೆ ಯುದ್ಧದಲ್ಲಿದೆ ಎಂದು ಮಾಹಿತಿ ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರ, ಪಂಜಾಬ್ ಮತ್ತು ರಾಜಸ್ಥಾನ ಸೇರಿದಂತೆ ಗಡಿ ರಾಜ್ಯಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಹಾರಿಸಿದ್ದರಿಂದ ಉಭಯ ದೇಶಗಳು ದಾಳಿ ಮತ್ತು ಪ್ರತಿದಾಳಿಗೆ ಸಾಕ್ಷಿಯಾಗಿವೆ.ಭಾರತವು ತನ್ನ ಮುಗ್ಧ ನಾಗರಿಕರನ್ನು ಉಳಿಸಲು, ತನ್ನ ಮೂರು ಜೆಟ್‌ಗಳೊಂದಿಗೆ ಪಾಕಿಸ್ತಾನದ ಎಲ್ಲಾ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹೊಡೆದುರುಳಿಸಿತು.ಉಗ್ರರು ಹೆಂಡತಿ ಮತ್ತು ಮಕ್ಕಳ ಮುಂದೆ ಜನರನ್ನು ಕೊಂದರು, ಮತ್ತು ಅವರು ಧರ್ಮದ ಆಧಾರದ ಮೇಲೆ ಹಾಗೆ ಮಾಡಿದರು. ನಾವು ನಿನ್ನೆ (ಆಪರೇಷನ್ ಸಿಂಧೂರ್) ಮಾಡಿದ್ದು ಭಯೋತ್ಪಾದನೆಗೆ ನಮ್ಮ ಪ್ರತಿಕ್ರಿಯೆ ಎಂದು ಅವರು ಹೇಳಿದರು.

ಒಂಬತ್ತು ಸ್ಥಳಗಳಲ್ಲಿ ಭಯೋತ್ಪಾದಕ ಕಾರ್ಖಾನೆಗಳನ್ನು ಹೊರತೆಗೆಯುವಾಗ ಭಾರತದ ಪ್ರತಿಕ್ರಿಯೆಯನ್ನು ಅಳೆಯಲಾಯಿತು ಮತ್ತು ಮಾಪನಾಂಕ ಮಾಡಲಾಯಿತು. ಈ ಭೀಕರ ಹತ್ಯೆಗಳನ್ನು ನಡೆಸಿದ ಜನರು ಮತ್ತು ಅವರ ಬೆಂಬಲಿಗರನ್ನು ಮಾತ್ರ ಗುರಿಯಾಗಿಸುವಲ್ಲಿ ನಾವು ಬಹಳ ಜಾಗರೂಕರಾಗಿದ್ದೇವೆ ಎಂದು ಅವರು ಹೇಳಿದರು.

# ಮಾವು, ಪುಸ್ತಕ ಮೇಳಕ್ಕೆ ಡಾಲಿ ಧನಂಜಯ್ ಚಾಲನೆ



**ಬೆಂಗಳೂರು, ಮೇ.10–**ಗರುಡಾ ಮಾಲ್‌ನಲ್ಲಿ ಬಹು ನಿರೀಕ್ಷಿತ ಬೇಸಿಗೆ ಮಾವು ಮೇಳ ಮತ್ತು ಪುಸ್ತಕೋತ್ಸವವನ್ನು ಮೇ 11ರವರೆಗೆ ಆಯೋಜಿಸಲಾಗಿದೆ. ಬಾಯಲ್ಲಿ ನೀರೂರಿಸುವ ಹಣ್ಣುಗಳ ರಾಜ, ಸಿಹಿ, ಸಹಿಯಾದ ಮಾವು ಸವಿಯಲು ಮತ್ತು ಅಮರ ಸಾಹಿತ್ಯ ರತ್ನಗಳನ್ನು ಒಟ್ಟಿಗೆ ಮನೆಗೆ ಕೊಂಡೊಯ್ಯಲು ಸದವಕಾಶವಾಗಿದೆ. ರೈತರಿಂದ ನೇರವಾಗಿ ಗುಣಮಟ್ಟದ ಮಾವುಗಳನ್ನು ಖರೀದಿಸಲು ಉಜ್ವಲ ಅವಕಾಶ ಕಲ್ಪಿಸಲಾಗಿದೆ.

ಈ ಮೇಳದ ಉದ್ಘಾಟನೆಯನ್ನು ಕನ್ನಡ ಖ್ಯಾತ ಚಲನಚಿತ್ರ ನಟ ಡಾಲಿ ಧನಂಜಯ್, ಶಾಸಕ ಉದಯ್ ಗರುಡಾಚಾರ್ ಅವರು ನೆರವೇರಿಸಿದರು.ಇದೇ ಸಂದರ್ಭದಲ್ಲಿ ಡಾಲಿ ಧನಂಜಯ್ ಮಾತನಾಡಿ ಮಕ್ಕಳಿಂದ ಮತ್ತು ಹಿರಿಯರವರೆಗೆ ಅಕ್ಷರ ಜ್ಞಾನ ಸಂಪಾದನೆಗೆ 1ಲಕ್ಷ ಪುಸ್ತಕಗಳು ಇಲ್ಲಿ ಲಭ್ಯವಿವೆ. ರೈತರಿಂದ ನೇರವಾಗಿ ಖರೀದಿಸಿ ಗ್ರಾಹಕರಿಗೆ ನೇರವಾಗಿ ಮಾವಿನ ಹಣ್ಣು ಮಾರಾಟ ಮಾಡುವ ಮತ್ತು ಪ್ರದರ್ಶನದ ಉತ್ತಮ ವೇದಿಕೆ ಕಲ್ಪಿಸಲಾಗಿದೆ ಎಂದರು.

ಕನ್ನಡ ನಾಡು, ದೇಶಕ್ಕಾಗಿ ಪ್ರತಿಯೊಬ್ಬರೂ ಗಟ್ಟಿಯಾಗಿ ನಿಲ್ಲಬೇಕು. ಹಲಸಿನ ಹಣ್ಣು, ಮಾವಿನಹಣ್ಣುಗಳನ್ನು ನಾನು ಬಹಳ ಇಷ್ಟಪಡುತ್ತೇನೆ. ಪ್ರತಿಯೊಬ್ಬ ಹಣ್ಣುಗಳನ್ನು ತಿಂದು ಆರೋಗ್ಯವಂತರಾಗಿ ಎಂದು ಹೇಳಿದರು.

ಉದಯ್ ಗರುಡಾಚಾರ್ ಮಾತನಾಡಿ, ದೇಶದಲ್ಲಿ ರೈತ ಮತ್ತು ಸೈನಿಕ ಎರಡು ಕಣ್ಣುಗಳು ಇದ್ದಂತೆ. ನಮ ಮಾವಿನ ಮೇಳದಿಂದ ರೈತರಿಗೆ ಉತ್ತಮ ಬೆಂಬಲ ಬೆಲೆ ಸಿಗಲಿದೆ, ಸಾರ್ವಜನಿಕರಿಗೆ ಉತ್ತಮ ಮಾವಿನ ಹಣ್ಣು ಸವಿಯುವ ಅವಕಾಶ ಸಿಗುತ್ತದೆ. ಅಕ್ಷರ ಜ್ಞಾನ ಎಂದೂ ಕಡಿಮೆಯಾಗಬಾರದು, ಪ್ರತಿದಿನ ಪುಸ್ತಕ ಓದುವುದರಿಂದ ಜ್ಞಾನ ಸಂಪಾದನೆ ಇನ್ನು ಹೆಚ್ಚಾಗುತ್ತದೆ ಎಂದು ನುಡಿದರು.

# ತಮಿಳುನಾಡಿನ ಈ ರೋಡ್‌ನಲ್ಲಿ ಬಾವಿಯೊಳಗೆ ನವವಿವಾಹಿತ ದಂಪತಿ ಶವ ಪತ್ತೆ



**ಚೆನ್ನೈ, ಮೇ 10–** ತಮಿಳುನಾಡಿನ ಈ ರೋಡ್‌ನಲ್ಲಿರುವ ಬಾವಿಯೊಂದರಲ್ಲಿ ನವವಿವಾಹಿತ ದಂಪತಿಯ ಶವಗಳು ಪತ್ತೆಯಾಗಿವೆ. ಇಂದು ಬೆಳಗ್ಗೆ 8 ಗಂಟೆ ಸುಮಾರಿಗೆ ಸ್ಥಳೀಯ ನಿವಾಸಿಗಳು ನೀರಿನಲ್ಲಿ ತೇಲು ತ್ತಿರುವ ಶವಗಳನ್ನು ನೋಡಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ, ತಕ್ಷಣ ಪೊಲೀಸರು ಆಗಮಿಸಿದ್ದಾರೆ.

ಪೊಲೀಸರ ಪ್ರಕಾರ, ಪುದುಕೋತುಕಾಡು ಗ್ರಾಮದ ಕಟ್ಟಡ ಕಾರ್ಮಿಕ ಶಕ್ತಿವೇಲ್ ಮತ್ತು ಇಂಡಿಯಾಂಪಾಲಯಂ ನಿವಾಸಿ ಪ್ರಿಯದರ್ಶಿನಿ ಸುಮಾರು ಏಳು ತಿಂಗಳಿಂದ ಪರಸ್ಪರ ಪ್ರೀತಿಸುತ್ತಿದ್ದರು ಮತ್ತು ಅವರ ಕುಟುಂಬಗಳ ಒಪ್ಪಿಗೆಯೊಂದಿಗೆ ವಿವಾಹವಾಗಿದ್ದರು.ರಾತ್ರಿ, ದಂಪತಿಗಳು ಸ್ಥಳೀಯ ಗ್ರಾಮ ಉತ್ಸವದಲ್ಲಿ ಭಾಗವಹಿಸಲು ಇಂಡಿಯಾಂಪಾಲಯಂನಲ್ಲಿರುವ ಪ್ರಿಯದರ್ಶಿನಿ ಅವರ ತಾಯಿಯ ಮನೆಗೆ ಹೋಗಿದ್ದರು.ಮರುದಿನ ಬೆಳಗ್ಗೆ, ಗ್ರಾಮಸ್ಥರು ಹತ್ತಿರದ ಬಾವಿಯಲ್ಲಿ ಅವರ ಶವವನ್ನು ಕಂಡಿದ್ದಾರೆ. ಕೂಡಲೇ ಕಾಡತ್ತೂರು ಪೊಲೀಸರಿಗೆ ಮಾಹಿತಿ ನೀಡಿದರು. ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ನಂತರ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸತ್ಯಮಂಗಲಂನ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿದ್ದಾರೆ.

ಪೊಲೀಸರು ಅನುಮಾನಾಸ್ಪದ ಸಾವಿನ ಪ್ರಕರಣವನ್ನು ದಾಖಲಿಸಿಕೊಂಡಿದ್ದು, ದಂಪತಿ ಸಾವಿಗೆ ಕಾರಣವಾದ ವಿಷಯ ಪತ್ತೆ ಮಾಡಲು ತನಿಖೆ ಮುಂದುವರೆಸಿದ್ದಾರೆ. ಇತ್ತೀಚೆಗೆ, ಮೇ 2 ರಂದು ತಮಿಳುನಾಡಿನ ಈರೋಡ್ ಜಿಲ್ಲೆಯ ತಮ್ಮ ತೋಟದ ಮನೆಯಲ್ಲಿ ಒಂಟಿಯಾಗಿ ವಾಸಿಸುತ್ತಿದ್ದ ವೃದ್ಧ ದಂಪತಿಯನ್ನು ಕ್ರೂರವಾಗಿ ಕೊಲೆ ಮಾಡಲಾಗಿತ್ತು.

# ಏಳು ಜೆಇಎಂ ಉಗ್ರರ ಹತ್ಯೆ

**ನವದೆಹಲಿ,ಮೇ,9–** ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಪಾಕಿಸ್ತಾನ ನೆಲಕ್ಕೆ ನುಗ್ಗಿ 100ಕ್ಕೂ ಅಧಿಕ ಉಗ್ರರನ್ನು ಹತ್ಯೆ ಮಾಡಿದ ಬೆನ್ನಲ್ಲೇ ಭಾರತಕ್ಕೆ ನುಸುಳುತ್ತಿದ್ದ ಯತ್ನಿಸುತ್ತಿದ್ದ ಜೈಶ್–ಎ–ಮೊಹಮ್ಮದ್ ಸಂಘಟನೆಯ 7 ಉಗ್ರರನ್ನು ಮತ್ತು ಕಾಶ್ಮೀರದ ಸಾಂಬಾದಲ್ಲಿ ಗಡಿ ಭದ್ರತಾ ಪಡೆ ಹೊಡೆದುರುಳಿಸುವಲ್ಲಿ ಯಶಸ್ವಿಯಾಗಿದೆ

ಭಾರತ ಮತ್ತು ಪಾಕಿಸ್ತಾನದ ನಡುವೆ ಉಂಟಾಗಿರುವ ಉದ್ವಿಘ್ನತೆಯ ನಡುವೆ ಅದರ ಲಾಭ ಪಡೆಯಲು ಯತ್ನಿಸಿದ ಉಗ್ರರನ್ನು ಹತ್ಯೆ ಮಾಡಲಾಗಿದೆ. ಗಡಿಯಲ್ಲಿ ಉಗ್ರರು ಮತ್ತು ಗಡಿ ಭದ್ರತಾ ಪಡೆಯ ಯೋಧರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ 7 ಮಂದಿ ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ. ಈ ಮೂಲಕ ಗಡಿ ಭಾಗದಲ್ಲಿ ವ್ಯಾಪಕ ಕಟ್ಟೆಚ್ಚರ ವಹಿಸಲಾಗಿದೆ.

## ವಿವಿಧ ವಸತಿ ಶಾಲಾ, ಕಾಲೇಜುಗಳಲ್ಲಿ ಅತಿಥಿ ಶಿಕ್ಷಕ ನೇಮಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಮೇ.10–** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಶಾಲಾ ಹಾಗೂ ಕಾಲೇಜ್‌ಗಳಲ್ಲಿ ಖಾಲಿರುವರ ಶಿಕ್ಷಕ, ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು/ಶಿಕ್ಷಕರನ್ನು ನೇಮಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇರ ನೇಮಕಾತಿ/ ಬಡ್ತಿ/ ವರ್ಗಾವಣೆ ಮೂಲಕ ಹುದ್ದೆ ಭರ್ತಿ ಮಾಡುವವರಿಗೆ ಅಥವಾ ಪ್ರಸಕ್ತ ಶೈಕ್ಷಣಿಕ ಸಾಲಿನ ಅಂತ್ಯವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಮತ್ತು ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜ್ ಹಾಗೂ ಡಾ.ಎಪಿಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು/ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು. ಆಸಕ್ತರು ಅರ್ಜಿಗಳನ್ನು ಇಲಾಖೆಯ ವೆಬ್‌ಸೈಟ್ ವಿಳಾಸ: https:// dom.karnataka.gov.in ಅಥವಾ ಜಿಲ್ಲಾ ಕಚೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿ/ ಮೌಲಾನಾ ಆಜಾದ್ ಶಾಲೆ/ ಕಾಲೇಜು/ ವಸತಿ ಶಾಲೆ/ ಕಾಲೇಜುಗಳಲ್ಲಿ ನಿಗಧಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳಾದ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಪದವಿ ಅಂಕಪಟ್ಟಿ ಸೇರಿದಂತೆ ಅನುಭವ ಪ್ರಮಾಣ ಪತ್ರ, ಐ.ಡಿ & ಆಧಾರ್‌ಕಾರ್ಡ್ ಹಾಗೂ ಪಾಸ್ ಪೋರ್ಟ್ ಅಳತೆಯ ಭಾವಚಿತ್ರಗಳು ಝರಕ್ಸ್ ಪ್ರತಿಗಳೊಂದಿಗೆ ಮೇ.19ರ ಸಂಜೆ 5.30ಗಂಟೆಯೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಮೊಬೈಲ್ ಸಂಖ್ಯೆ: ರಾಯಚೂರು 8496098631, 9731028420, 9731341815, 9686853719, 6361866571, 9108175899, 9731028420, 9902906266, ಮಾನವಿ, ಸಿರವಾರ: 7411771075, 886733478, ದೇವದುರ್ಗ: 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306 ಹಾಗೂ 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಮೇ.10–**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ಪ್ರವೇಶಕ್ಕೆ ಆನ್‌ಲೈನ್ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳ, ಇಂಟಗ್ರೇಟೆಡ್ (ಉನ್ನತ್ತೀಕರಣಗೊಂಡ)/ ಪದವಿಪೂರ್ವ ಕಾಲೇಜುಗಳು, ಡಾ.ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಪದವಿಪೂರ್ವ ಕಾಲೇಜುಗಳು ಹಾಗೂ ಉನ್ನತ್ತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ತರಗತಿಗೆ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮತ್ತು ವಿಶೇಷಚೇತನ ವಿದ್ಯಾರ್ಥಿಗಳಿಗೆ ಪ್ರವೇಶಾತಿಯಲ್ಲಿಶೇ.4 ರಷ್ಟು ಸ್ಥಾನಗಳನ್ನು ಮೀಸಲಿಡಲಾಗಿದ್ದು, ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತುಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ್ರ.ಜಾತಿ/ ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆ ತೇರ್ಗಡೆಯಾದ ವಿದ್ಯಾರ್ಥಿಗಳು ಸೇವಾಸಿಂಧು: Website:https:// sevasindhuservices.karnataka.gov.in£À ಮೂಲಕ ಮೇ.17ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990, 08022535902, ರಾಯಚೂರು 9986311262, 9886891883, 9611811169, 8660476921, ಮಾನವಿ; 8971757620, ಸಿರವಾರ: 7975922835, ದೇವದುರ್ಗ: 8310846415, 9945121187, ಅರಕೇರಾ; 8073274117 ಲಿಂಗಸೂಗೂರು: 8880939711, ಸಿಂಧನೂರು: 9741050010, 9980432449ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.12ರಂದು ಜಿಲ್ಲಾಡಳಿತದಿಂದ ಭಗವಾನ್ ಬುದ್ಧ ಜಯಂತಿ

**ರಾಯಚೂರು,ಮೇ.10–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೇ.12ರ ಬೆಳಿಗ್ಗೆ 11ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಭಗವಾನ್ ಬುದ್ಧ ಜಯಂತಿ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

## ಮೇ.12 ಕ್ಕೆ ಮಾನಸಗಲ್ ಶ್ರೀಲಕ್ಷ್ಮೀ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಮೇ.10–**ಎರಡನೇ ತಿರುಪತಿ ಎಂದು ಖ್ಯಾತಿ ಪಡೆದ ಶ್ರೀಲಕ್ಷ್ಮೀ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ ಮೇ.12 ಸೋಮವಾರ ಸಾಯಂಕಾಲ 06 ಗಂಟೆಗೆ ಜರುಗುತ್ತದೆ ಎಂದು ಶ್ರೀನಿವಾಸ ಪೂಜಾರಿ ತಿಳಿಸಿದರು.





ವೈಶಾಖ ಶುದ್ಧ ಷಷ್ಠಿ ಎಂದು ಸ್ವಾಮಿಗೆ ಮದುವೆ ಮಾಡಲು ಕಂಕಣ ಕಟ್ಟಲಾಗು ವುದು. ಇದಾದ ಒಂಬತ್ತು ದಿನಗಳ ನಂತರ ಬುದ್ಧಪೂ ರ್ಣಿಮೆ ದಿನದಂದು ಮಹಾರ ಥೋತ್ಸವ ಜರುಗುವದು. ಕಂಕಣ ಕಟ್ಟಿದ ಮೇಲೆ ಮಾಲಾ ಧಾರಿಗಳು ಗೋವಿಂದ ನಾಮವನ್ನು ಜಪಿಸುತ್ತಾ 9 ದಿನಗಳ ಕಾಲ ನಿರಂತರವಾಗಿ ವಿಶೇಷ ಪೂಜೆಯನ್ನು ನೆರವೇ ರಿಸುತ್ತಾರೆ. ನಮ್ಮ ಸುತ್ತಮುತ್ತ ಲಿನ ಗ್ರಾಮಸ್ಥರು ಅನೇಕ ನೀತಿ ನಿಯಮಗಳನ್ನು ಪಾಲಿಸುತ್ತಾರೆ.

ರಥೋತ್ಸವದ ಒಂದು ದಿನ ಮೊದಲು ದಿನಾಂಕ 11–05–2025 ಭಾನುವಾರ ಸಾಯಂಕಾಲ 06 ಗಂಟೆಗೆ ಉಚ್ಚಯಾ ರಥೋತ್ಸವ ಜರುಗುತ್ತದೆ . ಅಂದು ಮಾನಸಗಲ್ ಗ್ರಾಮದ ಭಕ್ತಾದಿಗಳಿಂದ ಸೇವೆ ಮತ್ತು ವಿಶೇಷ ಪೂಜೆಯನ್ನು ಮಾಡುತ್ತಾರೆ. ಅಂದು ರಾತ್ರಿಯಿಂದ ಬೆಳಗ್ಗೆ ವರೆಗೆ ಇರಬಗೇರಾ ಭಕ್ತಾದಿಗಳಿಂದ ದಿಢ ನಮಸ್ಕಾರವನ್ನು ಅವರ ಮನೆಯಿಂದ ಸರಿ ಸುಮಾರು 3/4 ಕೀ ಮೀಟರ್ ದೂರದಿಂದ ಹಾಕುವುದು ವಿಶೇಷ . ಅಷ್ಟೇ ಅಲ್ಲದೆ ಇರಬಗೇರಾ ಹೇಮನೂರು ಕೋತಿಗುಡ್ಡ ತೆಗ್ಗಿಹಾಳ ಗ್ರಾಮದ ಭಕ್ತರು ಕುಟುಂಬ ಪರಿವಾರ ಸಮೇತ ಬಂದು ರಥೋತ್ಸವ ದಿನದಂದು ಬೆಳಗ್ಗೆ ಪಲ್ಲಕ್ಕಿ ಉತ್ಸವ ನೀರಿನ ಆಟ ಹಾಗೂ ಸಾವಿರಾರು ಭಕ್ತಾದಿಗಳಿಂದ ಜ್ಯೋತಿ ಬರುವ ಕಾರ್ಯಕ್ರಮ ಜರಗುತ್ತವೆ.

ಶ್ರೀಲಕ್ಷ್ಮೀ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ ತೆಲಂಗಾಣ ಆಂಧ್ರ ಮಹಾರಾಷ್ಟ್ರ ಗೋವಾ ಹಾಗೂ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಸುತ್ತಲಿನ ಗ್ರಾಮದವರು ಮತ್ತು ಬೇರೆ ರಾಜ್ಯದವರು ಸಹ ರಥೋತ್ಸವ ಕಾರ್ಯಕ್ರಮಕ್ಕೆ ಭಕ್ತರು ಆಗಮಿಸುತ್ತಿದ್ದಾರೆ. ಇದೊಂದು ಕಣ್ಣಿಗೆ ದೊಡ್ಡ ಹಬ್ಬವಾಗಿದೆಂದು ಹೇಳಲಾಗಿದೆ.

ಸಾಯಂಕಾಲ 05 ಗಂಟೆಗೆ ಭಕ್ತಾದಿಗಳು ಮೆರವಣಿಗೆ ಮೂಲಕ ಪಲ್ಲಕ್ಕಿಯಲ್ಲಿ ಶ್ರೀ ರಂಗನಾಥ ಸ್ವಾಮಿಯ ಮೂಲ ವಿಗ್ರಹವನ್ನು ರಥೋತ್ಸವದಲ್ಲಿ ಪ್ರತಿಷ್ಠಾಪಿಸಲು ಕರೆದುಕೊಂಡು ಹೋಗಿ ಬ್ರಹ್ಮರಥೋತ್ಸವದಲ್ಲಿ ಕೂರಿಸಿದ ನಂತರ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ದಿನಾಂಕ 12/05/2025 ಸಾಯಂಕಾಲ 6 ಗಂಟೆಗೆ ಬ್ರಹ್ಮರಥೋತ್ಸವ ಜರಗುತ್ತದೆ. ರಥೋತ್ಸವ ಕಾರ್ಯಕ್ರಮ ಮುಗಿದ ನಂತರ ರಾತ್ರಿಯಿಂದ ಬೆಳಗಿನ ಜಾವದ ವರೆಗೆ ವಿವಿಧ ಬಜನಾ ಕಲಾ ತಂಡಗಳ ವತಿಯಿಂದ ಭಜನ ಕಾರ್ಯಕ್ರಮದ ನೆರವೇರಿಸಲಾಗುತ್ತದೆ.

## ಜಾತಿಗಣತಿ ಕಾಲಂ ನಂ 61 ರಲ್ಲಿ ಮಾದಿಗ ಎಂದು ಕಡ್ಡಾಯವಾಗಿ ಬರೆಸಿ:ದೇಶರಾಜ್ ಕೊಡ್ಲಿ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಮೇ.10–** ಮೇ 5 ರಿಂದ ನಡೆಯುತ್ತಿರುವ ಮೂರು ಹಂತದ ಪರಿಶಿಷ್ಟ ಜಾತಿಗಳ 101 ಉಪ ಜಾತಿಗಳ ಸಮಗ್ರ ಸಮೀಕ್ಷೆ ವೇಳೆ ಜಿಲ್ಲೆ ಸಮಸ್ತ ಮಾದಿಗ ಸಮಾಜದ ಜನರು ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ಕ್ರಮ ಸಂಖ್ಯೆ 61 ರಲ್ಲಿ "ಮಾದಿಗ" ಎಂದೇ ಕಡ್ಡಾಯವಾಗಿ ಬರೆಸಬೇಕೆಂದು ಉಟಕನೂರು ಗ್ರಾಮ ಪಂಚಾಯತಿ ಮಾಜಿ ಸದಸ್ಯ ದೇಶರಾಜ್ ಕೊಡ್ಲಿ ಮಾದಿಗ ಸಮುದಾಯದ ಜನತೆಯಲ್ಲಿ ಮನವಿ ಮಾಡಿಕೊಂಡರು. ಈ ಮಹತ್ವದ ಅವಕಾಶ ತಪ್ಪಿಸಿಕೊಂಡವರು ಸರ್ಕಾರದ ಬಹುತೇಕ ಮಹತ್ವದ ಸೌಲಭ್ಯಗಳಿಂದ ವಂಚಿತರಾಗುವುದು ಖಂಡಿತ. ಸಮೀಕ್ಷೆಗಾಗಿ ಮಾಡಿರುವ ನಿಯಮಗಳ ಪ್ರಕಾರ ಪ್ರತಿಯೊಬ್ಬರು ಸೂಕ್ತ ದಾಖಲೆಗಳನ್ನು ಹೊಂದಿ ಕೇಳುವ ಎಲ್ಲ ಮಾಹಿತಿಯನ್ನು ನೀಡುವ ಮೂಲಕ ಕಡ್ಡಾಯವಾಗಿ ಮಾದಿಗ ಎಂದು ಬರೆಯಿಸಬೇಕೆಂದು ಅವರು ಮನವಿ ಮಾಡಿದರು.

ಮೇ 5ರಿಂದ 17 ವರೆಗೆ ಗಣತಿವಾರು ಮನೆ, ಮನೆಗೆ ತೆರಳಿ ದತ್ತಾಂಶಗಳ ಸಂಗ್ರಹಣೆ ನಡೆಯುತ್ತದೆ. 2ನೇ ಹಂತದಲ್ಲಿ ಮೇ 19ರಿಂದ 21ರವರೆಗೆ ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳನ್ನು ಏರ್ಪಡಿಸಿ ಮಾಹಿತಿ ನೀಡಲು ಅವಕಾಶ ನೀಡಲಾಗಿದೆ ಮತ್ತು ಈ ಎರಡು ಹಂತಗಳಲ್ಲಿ ಭಾಗಿಯಾಗಲು ಸಾಧ್ಯವಾಗದವರು 3ನೇ ಹಂತದ ಮೇ 19 ರಿಂದ 24 ರವರೆಗೆ ಆನ್ ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ ನೀಡಲಾಗಿದೆ, ಸ್ವಯಂ ಘೋಷಣೆಗೆ ಆಧಾರ ನಂಬರ್ ಮತ್ತು ಜಾತಿ ಪ್ರಮಾಣ ಪತ್ರದ ಆರ್.ಡಿ.ಸಂಖ್ಯೆ ಕಡ್ಡಾಯವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತ–ಪಾಕ್ ಸಂಘರ್ಷ ನಮಗೆ ಸಂಬಂಧಿಸಿದ್ದಲ್ಲ : ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್

**ವಾಷಿಂಗ್ಟನ್,ಮೇ.10–** ಪಹಲ್ಗಾಮ್ ಉಗ್ರ ದಾಳಿ ಬಳಿಕ ಉಲ್ಬಣವಾಗಿರುವ ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆ ವಿಚಾರವಾಗಿ ಕಡ್ಡಿಮುರಿದಂತೆ ಉತ್ತರ ನೀಡಿರುವ ಅಮೆರಿಕ ಇದಕ್ಕೂ ನಮಗೂ ಸಂಬಂಧವಿಲ್ಲ ಎಂದು ಹೇಳಿದೆ.



ಈ ಬಗ್ಗೆ ಮಾತನಾಡಿರುವ ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ , ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷ ನಮಗೆ ಸಂಬಂಧವಿಲ್ಲ. ಆದರೂ ನಾನು ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎರಡೂ ದೇಶಗಳು ಉದ್ವಿಗ್ನತೆಯನ್ನು ಕಡಿಮೆ ಮಾಡಲು ಪ್ರೋತ್ಸಾಹಿಸುತ್ತಿದ್ದೇವೆ ಎಂದು ಹೇಳಿದರು.

ಸ್ವಲ್ಪ ಮಟ್ಟಿಗೆ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಪ್ರೋತ್ಸಾಹಿಸುವುದನ್ನು ನಾವು ಮಾಡಬಹುದಾಗಿದೆ. ಆದರೆ ನಾವು ಯುದ್ಧದ ಮಧ್ಯದಲ್ಲಿ ಭಾಗಿಯಾಗುವುದಿಲ್ಲ, ಅದು ಮೂಲಭೂತವಾಗಿ ನಮ ವಿಷಯವಲ್ಲ. ನಮಗೆ ಸಂಬಂಧಿಸಿದ್ದಲ್ಲ ಮತ್ತು ಅಮೆರಿಕದ ನಿಯಂತ್ರಣ ಸಾಮರ್ಥ್ಯದೊಂದಿಗೆ ಯಾವುದೇ ಸಂಬಂಧವಿಲ್ಲ ಎಂದು ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ.ಇದೇ ವೇಳೆ ಅಮೆರಿಕವು ಭಾರತೀಯರಿಗೆ ಶಸ್ತ್ರಗಳನ್ನು ತ್ಯಜಿಸಲು ಹೇಳಲು ಸಾಧ್ಯವಿಲ್ಲ. ಪಾಕಿಸ್ತಾನಿಗಳಿಗೆ ಶಸ್ತ್ರಗಳನ್ನು ತ್ಯಜಿಸಲು ನಾವು ಹೇಳಲು ಸಾಧ್ಯವಿಲ್ಲ. ಆದ್ದರಿಂದ, ನಾವು ರಾಜತಾಂತ್ರಿಕ ವಾರ್ಗಗಳ ಮೂಲಕ ಮಾತ್ರ ಈ ವಿಷಯುವನ್ನು ಮುಂದುವರಿಸುತ್ತೆ?ವೆ ಎಂದು ಫ್ಯಾಕ್ಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದರು.

ಅಂತೆಯೇ ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ವಿಶಾಲವಾದ ಪ್ರಾದೇಶಿಕ ಯುದ್ಧ ಎಂದು ಹೇಳಿದ ವ್ಯಾ, ಇದು ಪರಮಾಣು ಸಂಘರ್ಷವಾಗಿ ಬದಲಾಗಬಾರದು ಎಂಬುದು ನಮ ಆಶಯ ಮತ್ತು ನಿರೀಕ್ಷೆಯಾಗಿದೆ ಎಂದು ಹೇಳಿದ್ದಾರೆ. ಅಲ್ಲದೆ ಸದ್ಯಕ್ಕೆ, ಅದು ಸಂಭವಿಸುತ್ತದೆ ಎಂದು ನಾವು ಭಾವಿಸುವುದಿಲ್ಲ ಎಂದು ಹೇಳಿದ್ದಾರೆ.ಯುದ್ಧ ನಿಲ್ಲಿಸಲು ಸಿದ್ಧ ಎಂದಿದ್ದ ಟ್ರಂಪ್: ಈ ಮೊದಲು ಉಗ್ರರ ವಿರುದ್ಧದ ಭಾರತದ ಕಾರ್ಯಾಚರಣೆಯನ್ನು ಮುಯ್ಯಿಗೆ ಮುಯ್ಯಿ ಎಂದು ಬಣ್ಣಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್? ಟ್ರಂಪ್ ಅವರು, ಭಾರತ ಮತ್ತು ಪಾಕಿಸ್ಥಾನ ನಡುವಿನ ಉದ್ವಿಗ್ನ ಸ್ಥಿತಿಯನ್ನು ನಿಲ್ಲಿಸಲು ಸಹಾಯ ಮಾಡಲು ಸಿದ್ಧನಿದ್ದೇನೆ ಎಂದು ಹೇಳಿದ್ದರು. ಪ್ರತೀಕಾರದ ದಾಳಿಗಳನ್ನು ನಿಲ್ಲಿಸಿ.

ನಿಮಗೇನಾದರೂ ಸಹಾಯ ಬೇಕಿದ್ದರೆ ನಾನಿದ್ದೇನೆ. ಭಾರತ ಮತ್ತು ಪಾಕಿಸ್ಥಾನ ಜತೆ ಉತ್ತಮ ಸಂಬಂಧವಿದೆ. ಅವರೆಡೂ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ನಿಲ್ಲುವುದನ್ನು ನಾನು ನೋಡಲು ಬಯಸುತ್ತೇನೆ. ಇದಕ್ಕಾಗಿ ನಾನು ಸಹಾಯ ಮಾಡಲು ಸಾಧ್ಯವಾದರೆ, ಅದಕ್ಕೆ ನಾನು ಸಿದ್ಧನಿದ್ದೇನೆ ಎಂದು ಭಾರತ ಮತ್ತು ಪಾಕಿಸ್ಥಾನ ನಡುವಿನ ಯುದ್ಧದ ಕುರಿತ ಪ್ರಶ್ನೆಗೆ ಟ್ರಂಪ್ ಉತ್ತರಿಸಿದ್ದಾರೆ.

## ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರ ಸ್ಥಾಪನೆಗೆ ಅರ್ಜಿ ಆಹ್ವಾನ

**ರಾಯಚೂರು,ಮೇ.10–**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನಗರದ ರಿಮ್ಸ್ ಆಸ್ಪತ್ರಯಲ್ಲಿ ಮಾನಸಿಕ ಅನಾರೋಗ್ಯದಿಂದ ಬಳಲುತ್ತಿರುವ ನಿರಾಶ್ರಿತರಿಗೆ ಆರೋಗ್ಯ ಸೇವೆಗಳನ್ನು ಒದಗಿಸಲು ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರ ಸ್ಥಾಪಿಸಲು ಸರ್ಕಾರೇತರ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಇಸಿಆರ್‌ಸಿ ಘಟಕವನ್ನು ನಡೆಸಲು ಆಸಕ್ತಿಯುಳ್ಳ ಎನ್.ಜಿ.ಓ ಸಂಸ್ಥೆಗಳು ವೆಬ್‌ಸೈಟ್ ವಿಳಾಸ: https:// kppp.karntaka.gov.in ನಲ್ಲಿ ಮೇ.23ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಜಿಲ್ಲಾ ಕುಷ್ಠರೋಗ ನಿವಾರಣ ವಿಭಾಗಕ್ಕೆ ಭೇಟಿ ನೀಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ–02 ನೋಂದಣಿಗೆ ಅರ್ಜಿ ಆಹ್ವಾನ

**ರಾಯಚೂರು,ಮೇ.10–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–01ರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಪರೀಕ್ಷೆ–02ಕ್ಕೆ ನೋಂದಣಿಗೆ ಅರ್ಜಿ ಆಹ್ವಾನಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ–02ಕ್ಕೆ ಜಿಲ್ಲೆಯ 14,417 ವಿದ್ಯಾರ್ಥಿಗಳು ನೋಂದಾಯಿಸಿಕೊಳ್ಳಬೇಕು. ಈ ಪೈಕಿ 12,607 ವಿದ್ಯಾರ್ಥಿಗಳು ಈಗಾಗಲೇ ನೋಂದಣಿಯಾಗಿದ್ದು, 1,810 ವಿದ್ಯಾರ್ಥಿಗಳು ನೋಂದಣೆಯಾಗಬೇಕಾಗಿದೆ.

ಈ ಪರೀಕ್ಷೆಗೆ ನೋಂದಣಿಯಾಗಲು ವಿದ್ಯಾರ್ಥಿಗಳಿಗೆ ಪ್ರಪ್ರಥಮ ಬಾರಿಗೆ ಶುಲ್ಕ ವಿನಾಯಿತಿ ನೀಡಲಾಗಿದ್ದು, ವಿದ್ಯಾರ್ಥಿಗಳು ಮೇ.10ರೊಳಗಾಗಿ ನೋಂದಣಿ ಆಗಬಹುದಾಗಿದೆ. ಮೇ.26 ರಿಂದ ಜೂನ್ 06ರವರೆಗೆ ಪರೀಕ್ಷೆ–02 ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ಪ್ರೌಢ ಶಾಲೆಯ ಮುಖ್ಯಸ್ಥರನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ: ಮೇ.11ರಂದು ನಗರದ ವಿವಿಧಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಮೇ.10–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ 11 ಕೆ.ವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.11ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ03ಗಂಟೆಯವರೆಗೆ ವಿದ್ಯುತ್ತ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ಅಗ್ರಿಕಲ್ಚರ್ ಯೂನಿವರ್ಸಿಟಿ, ಅಸ್ಕಾಹಾಳ, ಕೃಷ್ಣ ಮೇಡೌಸ್, ಬೈಪಾಸ್ ರೋಡ್, ಅಮರಾವತಿ ಕಾಲೋನಿ, ಹೊಸ ಡಿ.ಸಿ ಆಫೀಸ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386 ಅಥವಾ 08532–231999ಗೆ ದೂರವಾಣಿಗಳಿಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೈಸಿಕಲ್ ಜಾಥ ಮೂಲಕ ಪರಿಸರ ಜಾಗೃತಿ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.10–**ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿ ತುಮಕೂರಿನ ಮಹಾಲಿಂಗಪ್ಪ ಬೃಹತ್ ಬೈಸಿಕಲ್ ಜಾಗೃತಿ ಜಾಥದ ಮೂಲಕ ಆಗಮಿಸಿ ಗ್ರಾಮದ ಜನರಿಗೆ ಪರಿಸರದ ಕುರಿತು ಹಾಗೂ ಯುವಕರಿಗೆ ದೇಶ ಭಕ್ತಿ ಕುರಿತು ಜಾಗೃತಿ ಮೂಡಿಸಿದರು.

ಮಾಜಿ ಯೋಧರಾದ ಆಂಜನೇಯ್ಯ ಜಲ್ಲಿ, ಶರಣಬಸವ ನೀರಮಾನ್ವಿ, ಪಂಪಣ್ಣ ಕುಂಬರ, ಮಹೇಶದೊರೆ,ಕರಿಬಸಪ್ಪಗೌಡ, ಸೇರಿದಂತೆ ಗ್ರಾಮದ ಮುಖಂಡರು ಇದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ: 9743497111, 9743496111**

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**